ಸಂಪುಟ : 11 ಸಂಚಿಕೆ: 42 ಪುಟ : 4+2 ಬೆಲೆ: 3.00 ರವಿವಾರ ಮಾರ್ಚ್ 15 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 42 Pages : 4+2 Price : 3.00 Sunday March 15 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅನೇಕ ಸಮಾಜಮುಖಿ ಕಾರ್ಯಕ್ರಮಗಳಿಗೆ ಚಾಲನೆ – ಪ್ರಭಾಕರ ಕೋರೆ ಅವರಿಗೆ ಕೆ.ಎಚ್. ಪಾಟೀಲ ಪ್ರಶಸ್ತಿ

# ದಿ.ಕೆ.ಎಚ್. ಪಾಟೀಲರ 101ನೇ ಜಯಂತ್ಯುತ್ಸವ ನಾಳೆ




■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರಿ ರಂಗದ ಭೀಷ್ಮ, ಮಾಜಿ ಸಚಿವ ದಿ.ಕೆ.ಎಚ್. ಪಾಟೀಲರ 101ನೇ ಜಯಂತ್ಯುತ್ಸವ ಸಮಾರಂಭವನ್ನು ಮಾರ್ಚ್ 16ರಂದು ಬೆಳಗ್ಗೆ 10.30ಕ್ಕೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದು ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿ ಜಯಂತಿ ವರ್ಷಾಚರಣೆಯ ಅಂಗವಾಗಿ ಹಲವು ರಚನಾತ್ಮಕ ಮತ್ತು ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಟನ್ ಸೇಲ್ ಸೊಸೈಟಿ ಶತಮಾನೋತ್ಸವದ ನೂತನ ಕಟ್ಟಡ ಹಾಗೂ ರಾಜೇಶ್ವರಿ ವಿದ್ಯಾನಿಕೇತನದ ವರ್ಗಗಳ ಸಂಕೀರ್ಣವನ್ನು ಇಂಧನ ಸಚಿವ ಕೆ.ಜೆ. ಜಾರ್ಜ್ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಅದೇ ರೀತಿ ಕೆ.ಎಚ್. ಪಾಟೀಲ ಆಸ್ಪತ್ರೆಯ ನೂತನ ಕಟ್ಟಡದ ಭೂಮಿಪೂಜೆ ನಡೆಯಲಿದ್ದು, 100 ಉಚಿತ ಕೀಲು ಬದಲಾವಣೆ ಶಸ್ತ್ರಚಿಕಿತ್ಸೆ, 12 ಉಚಿತ ಕಿಡ್ನಿ ಕಸಿ ಶಸ್ತ್ರಚಿಕಿತ್ಸೆ, ಒಂದು ವರ್ಷದ ಅವಧಿಯಲ್ಲಿ ಜನಿಸುವ ಹೆಣ್ಣುಮಕ್ಕಳಿಗೆ ಉಚಿತ ಹೆರಿಗೆ ಸೇವೆ ಹಾಗೂ 1000 ಮೋತಿಬಿಂದು ಶಸ್ತ್ರಚಿಕಿತ್ಸೆ ಯೋಜನೆಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಚಾಲನೆ ನೀಡಲಿದ್ದಾರೆ ಎಂದರು.

### ಜಯಂತ್ಯುತ್ಸವದ ಮುಖ್ಯ ಕಾರ್ಯಕ್ರಮಗಳು

1) ಕಾಟನ್ ಸೇಲ್ ಸೊಸೈಟಿ ಶತಮಾನೋತ್ಸವ ನೂತನ ಕಟ್ಟಡ ಉದ್ಘಾಟನೆ
2) ರಾಜೇಶ್ವರಿ ವಿದ್ಯಾನಿಕೇತನದ ವರ್ಗಗಳ ಸಂಕೀರ್ಣ ಉದ್ಘಾಟನೆ
3) ಕೆ.ಎಚ್. ಪಾಟೀಲ ಆಸ್ಪತ್ರೆ ನೂತನ ಕಟ್ಟಡದ ಭೂಮಿಪೂಜೆ
4) 100 ಉಚಿತ ಕೀಲು ಬದಲಾವಣೆ ಶಸ್ತ್ರಚಿಕಿತ್ಸೆ ಯೋಜನೆ
5) 12 ಉಚಿತ ಕಿಡ್ನಿ ಕಸಿ ಶಸ್ತ್ರಚಿಕಿತ್ಸೆ
6) ಹೆಣ್ಣುಮಕ್ಕಳಿಗೆ ಉಚಿತ ಹೆರಿಗೆ ಸೇವೆ
6) 1000 ಮೋತಿಬಿಂದು ಶಸ್ತ್ರಚಿಕಿತ್ಸೆ ಯೋಜನೆ
7) ಜಿಲ್ಲಾ ಆಸ್ಪತ್ರೆ ಆವರಣದಲ್ಲಿ "ಬುತ್ತಿ" ಊಟ–ಉಪಹಾರ ಕೇಂದ್ರ ಆರಂಭ.

"ದಿ.ಕೆ.ಎಚ್. ಪಾಟೀಲರ ಆದರ್ಶ ಮತ್ತು ಸಮಾಜಮುಖಿ ಚಿಂತನೆಗಳನ್ನು ಮುಂದುವರೆಸುವ ಉದ್ದೇಶದಿಂದ ಈ ಬಾರಿ ಜಯಂತ್ಯುತ್ಸವವನ್ನು ಅನೇಕ ರಚನಾತ್ಮಕ ಕಾರ್ಯಕ್ರಮಗಳೊಂದಿಗೆ ಆಚರಿಸಲಾಗುತ್ತಿದೆ."


– **ಡಿ.ಆರ್. ಪಾಟೀಲ,** ಉಪಾಧ್ಯಕ್ಷರು, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ.

ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ರೋಗಿಗಳು ಮತ್ತು ಅವರ ಸಂಬಂಧಿಗಳಿಗೆ ಅನುಕೂಲವಾಗುವಂತೆ ಕೆ.ಎಚ್. ಪಾಟೀಲ ಪ್ರತಿಷ್ಠಾನದ ವತಿಯಿಂದ ನಿರ್ಮಿಸಿದ "ಬುತ್ತಿ" ಎನ್ನುವ ಊಟ–ಉಪಹಾರ ಕೇಂದ್ರವನ್ನು ಅರಣ್ಯ ಸಚಿವ ಈಶ್ವರ ಖಂಡ್ರೆ ಲೋಕಾರ್ಪಣೆಗೊಳಿಸಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಮಾಜಿ ರಾಜ್ಯಸಭಾ ಸದಸ್ಯ ಹಾಗೂ ಕೆಎಚ್ ಸಂಸ್ಥೆಯ ಮಾಜಿ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಅವರಿಗೆ ಈ ಬಾರಿಯ ಕೆ.ಎಚ್. ಪಾಟೀಲ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಪ್ರಶಸ್ತಿಯಲ್ಲಿ 5 ಲಕ್ಷ ರೂ. ನಗದು ಹಾಗೂ ಸ್ಮರಣಿಕೆ ಒಳಗೊಂಡಿರುತ್ತದೆ. ಜೊತೆಗೆ ಅವಿಭಜಿತ ಧಾರವಾಡ ಜಿಲ್ಲೆಯ ಕೆ.ಎಚ್. ಪಾಟೀಲರ 100ಕ್ಕೂ ಹೆಚ್ಚು ಒಡನಾಡಿಗಳನ್ನು ಸನ್ಮಾನಿಸಲಾಗುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಉಪಸಭಾಪತಿ ರುದ್ರಪ್ಪ ಲಮಾಣಿ, ರೋಣ ಶಾಸಕ ಹಾಗೂ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ, ಎಫ್‌ಕೆಸಿಸಿಐ ಅಧ್ಯಕ್ಷೆ ಉಮಾ ರೆಡ್ಡಿ, ಸರಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ನರಗುಂದ ಶಾಸಕ ಸಿ.ಸಿ. ಪಾಟೀಲ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ಮುಖಂಡರಾದ ಪ್ರಭು ಬುರಬುರೆ, ಜೆ.ಕೆ. ಜಮಾದಾರ, ಕೃಷ್ಣಗೌಡ ಪಾಟೀಲ, ಅಶೋಕ ಮಂದಾಲಿ, ಸಿದ್ಧಲಿಂಗೇಶ ಪಾಟೀಲ, ಬಸವರಾಜ ಕಟ್ಟಿಮನಿ, ರವಿ ಮೂಲಿಮನಿ, ಶಕುಂತಲಾ ಅಕ್ಕಿ, ಉಮರಫಾರೂಕ್ ಹುಬ್ಬಳ್ಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಇಂದು ರಾಣಿ ಅಬ್ಬಕ್ಕ, ಮಾತೆ ಮಹಾದೇವಿ ಕುರಿತು ದತ್ತಿ ಉಪನ್ಯಾಸ






■ ವಿಜಯಸಾಕ್ಷಿ ಸುದ್ದಿ, ಗದಗ

ಬಸವದಳದ ವತಿಯಿಂದ ಪ್ರತಿವಾರ ನಡೆಯುವ ಶರಣ ಸಂಗಮ ಕಾರ್ಯಕ್ರಮದ ಅಂಗವಾಗಿ ಮಾರ್ಚ್ 15ರಂದು ಬೆಳಿಗ್ಗೆ 10 ಗಂಟೆಗೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ದತ್ತಿ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮವು ಬಸವದಳದ 1689ನೇ ಶರಣ ಸಂಗಮವಾಗಿದ್ದು, ಗದಗ ತಾಲೂಕ ಶರಣ ಸಾಹಿತ್ಯ ಪರಿಷತ್ತು, ಗದಗ ತಾಲೂಕ ಕದಳಿ ಮಹಿಳಾ ವೇದಿಕೆ ಹಾಗೂ ಬಸವದಳ ಗದಗ–ಬೆಟಗೇರಿಗಳ ಸಂಯುಕ್ತಾಶ್ರಯದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ರಾಣಿ ಅಬ್ಬಕ್ಕ ಹಾಗೂ ಡಾ. ಮಾತೆ ಮಹಾದೇವಿ ಅವರ ಕುರಿತು ದತ್ತಿ ಉಪನ್ಯಾಸ ನಡೆಯಲಿದ್ದು, ಬಸವದಳದ ಕಾರ್ಯಾಧ್ಯಕ್ಷ ಎಂ.ಬಿ. ಲಿಂಗದಾಳ ಅಧ್ಯಕ್ಷತೆ ವಹಿಸಲಿದ್ದಾರೆ.

ಶರಣ ಸಾಹಿತ್ಯಗಾರ್ತಿ ಗಿರಿಜಕ್ಕ ಧರ್ಮರಡ್ಡಿ ಅವರು ಡಾ. ಮಾತೆ ಮಹಾದೇವಿ ಕುರಿತು ಉಪನ್ಯಾಸ ನೀಡಲಿದ್ದು, ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ಅವರು ರಾಣಿ ಅಬ್ಬಕ್ಕ ಕುರಿತು ಮಾತನಾಡಲಿದ್ದಾರೆ.

ಕಾರ್ಯಕ್ರಮಕ್ಕೆ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರ ಅತಿಥಿಯಾಗಿ ಆಗಮಿಸಲಿದ್ದು, ದತ್ತಿ ದಾನಿಗಳಾದ ಎಂ. ಬಸವರಾಜ ಹಾಗೂ ಅರವಿಂದ ಕೂರಾ ಉಪಸ್ಥಿತರಿರಲಿದ್ದಾರೆ.

## ಮಾತೃಶ್ರೀ ಸೇವಾ ಟ್ರಸ್ಟ್‌ನಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಸಮಾರಂಭದಲ್ಲಿ ಬೊಮ್ಮಾಯಿ

# ತಾಯ್ತನದ ಮಹಿಮೆ ಅಳತೆಯಾಗದು!

■ ವಿಜಯಸಾಕ್ಷಿ ಸುದ್ದಿ, ಗದಗ

ಜೀವನದ ಅಂತ್ಯದ ಸಮಯದಲ್ಲೂ ತಾಯಿ ನೆನಪಾದಾಗ ಕಣ್ಣು ಒದ್ದೆಯಾಗುತ್ತದೆ. ತಾಯ್ತನ ಎನ್ನುವ ಶಬ್ದ ತುಂಬಾ ಮಹತ್ವದ್ದು. ಅದನ್ನು ಮಾತಿನಲ್ಲಿ ವಿವರಿಸಲು ಸಾಧ್ಯವಿಲ್ಲ. ತಾಯಿಯ ಪ್ರೀತಿಯನ್ನು ಅನುಭವಿಸಿದಾಗ ಮಾತ್ರ ಅವಳ ತ್ಯಾಗದ ಅರ್ಥ ಗೊತ್ತಾಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.



ನಗರದ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಜಗದ್ಗುರು ಸಿದ್ದರಾಮ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ನಡೆದ ಲಿಂ. ಬಸಮ್ಮ ತಾಯಿ ಸಂಗನಗೌಡ ಪಾಟೀಲ ಹಾಗೂ ಲಿಂ. ಲಕ್ಷ್ಮಮ್ಮ ಗೌಡರ ಅವರ ಪುಣ್ಯಸ್ಮರಣೋತ್ಸವ ಮತ್ತು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಆಯೋಜಿಸಲಾದ ಪ್ರತಿಭಾ ದೀಪ್ತಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡು ಮಾತನಾಡಿದ ಶಾಸಕ ಜಿ.ಎಸ್. ಪಾಟೀಲ, ಎಸ್.ಆರ್. ಬೊಮ್ಮಾಯಿ ಹಾಗೂ ಬಸವರಾಜ ಬೊಮ್ಮಾಯಿ ರಾಜ್ಯದ ಮುಖ್ಯಮಂತ್ರಿ ಆಗಲು ಅವರ ತಾಯಿ ಗಂಗಮ್ಮ ತಾಯಿಯ ಕಾಲ್ಗುಣ ಪ್ರಮುಖ ಕಾರಣವಾಗಿದೆ. ಮಹಿಳೆಯರಿಗೆ ಸಮಾನತೆ ನೀಡುವ ಹೋರಾಟ 12ನೇ ಶತಮಾನದಿಂದ ನಡೆಯುತ್ತಲೇ ಬಂದಿದೆ. ಆದರೂ ಇಂದಿಗೂ ಕೆಲವೆಡೆ ಮಹಿಳೆಯರಿಗೆ ಸಮಾನ ಅವಕಾಶಗಳಿಲ್ಲ ಎಂಬುದು ವಿಷಾದಕರ ಸಂಗತಿ ಎಂದು ಹೇಳಿದರು.

ಕರ್ನಾಟಕ ವಿಶ್ವವಿದ್ಯಾಲಯದ ಹಂಗಾಮಿ ಕುಲಪತಿ ಜಯಶ್ರೀ ಶಿವಾನಂದ ಮಾತನಾಡಿ, ಈ ಸಮಾರಂಭದಲ್ಲಿ ಇಬ್ಬರು ತಾಯಂದಿರರ ಮಹತ್ವದ ಸಾಧನೆಗಾಗಿ ವಿದ್ಯಾರ್ಥಿನಿಯರಿಗೆ ಸನ್ಮಾನ ಮಾಡಲಾಗಿದೆ. ಜನ್ಮ ನೀಡಿದ ತಾಯಿ ಹಾಗೂ ಹೊತ್ತ ಭೂಮಿ ಎರಡೂ ಸ್ವರ್ಗಕ್ಕಿಂತ ಮಿಗಿಲು. ಮಕ್ಕಳಿಗೆ ವಿದ್ಯೆಯ ಜೊತೆಗೆ ಸಂಸ್ಕಾರ ನೀಡುವುದು ತಾಯಿಯ ಪ್ರಮುಖ ಜವಾಬ್ದಾರಿ ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ತಮಗಾಗಿ ಮಾತ್ರವಲ್ಲದೆ ಸಮಾಜದ ಏಳಿಗೆಗಾಗಿ ಶ್ರಮಿಸಿದವರ ಪುಣ್ಯಸ್ಮರಣೆಯನ್ನು ಮಾಡಲಾಗುತ್ತದೆ. ಬಸಮ್ಮ ತಾಯಿ ಐದು ಮುತ್ತಿನಂತ ಮಕ್ಕಳಿಗೆ ಜನ್ಮ ನೀಡಿ ಅವರನ್ನು ಉನ್ನತ ಸ್ಥಾನಕ್ಕೆ ತಲುಪುವಂತೆ ಮಾಡಿದ್ದಾರೆ. ಇದಕ್ಕೆ ಅವರ ಸಂಸ್ಕಾರವೇ ಕಾರಣ ಎಂದು ಹೇಳಿದರು. ಈ ಸಂದರ್ಭದಲ್ಲಿ ಐವರು ಸಾಧಕ ವಿದ್ಯಾರ್ಥಿನಿಯರಿಗೆ ಗೌರವ ಸನ್ಮಾನ ಮಾಡಲಾಯಿತು.

"ತಾಯಿಯ ಪ್ರೀತಿಯನ್ನು ಅನುಭವಿಸಿದಾಗ ಮಾತ್ರ ಅವಳ ತ್ಯಾಗದ ಮಹತ್ವ ಅರಿವಾಗುತ್ತದೆ. ನಮ್ಮ ಬದುಕಿಗೆ ಜನ್ಮ ನೀಡಿದ ಕೀರ್ತಿ ತಾಯಿಗೆ ಸಲ್ಲುತ್ತದೆ."

– **ಬಸವರಾಜ ಬೊಮ್ಮಾಯಿ,** ಮಾಜಿ ಮುಖ್ಯಮಂತ್ರಿ

### ಕಾರ್ಯಕ್ರಮದ ವಿಶೇಷತೆಗಳು

1) ಮಾತೃಶ್ರೀ ಸೇವಾ ಟ್ರಸ್ಟ್‌ನಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ
2) ಲಿಂ. ಬಸಮ್ಮ ತಾಯಿ ಸಂಗನಗೌಡ ಪಾಟೀಲ ಹಾಗೂ ಲಿಂ. ಲಕ್ಷ್ಮಮ್ಮ ಗೌಡರ ಪುಣ್ಯಸ್ಮರಣೋತ್ಸವ
3) ಪ್ರತಿಭಾ ದೀಪ್ತಿ ಪ್ರಶಸ್ತಿ ಪ್ರದಾನ ಸಮಾರಂಭ
4) ಐದು ಸಾಧಕ ವಿದ್ಯಾರ್ಥಿನಿಯರಿಗೆ ಸನ್ಮಾನ
5) ಜಗದ್ಗುರು ಸಿದ್ದರಾಮ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಕಾರ್ಯಕ್ರಮ

## ಮಾಜಿ ಸಚಿವ ದಿ.ಹೆಚ್.ವೈ. ಮೇಟಿ ಕನಸು ನನಸು– ಸಿದ್ದರಾಮಯ್ಯ

# ಬಾಗಲಕೋಟೆ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಅಡಿಗಲ್ಲು




■ ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ

ದಿವಂಗತ ಹೆಚ್.ವೈ. ಮೇಟಿ ಅವರ ಆಶಯದಂತೆ ಬಾಗಲಕೋಟೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಅಡಿಗಲ್ಲು ಇಡುವ ಮೂಲಕ ಅವರ ಕನಸು ನನಸು ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ನವನಗರ ಹೆಲಿಪ್ಯಾಡ್‌ನಲ್ಲಿ ಶನಿವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವೈದ್ಯಕೀಯ ಕಾಲೇಜಿನ ಕಾಮಗಾರಿಗೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಕಾಮಗಾರಿ ಆರಂಭವಾಗಲಿದೆ ಎಂದು ತಿಳಿಸಿದರು.

ಕೃಷ್ಣಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದ ಸಂತ್ರಸ್ತರಿಗೆ ಪರಿಹಾರ ಚೆಕ್ ವಿತರಣೆ ಕಾರ್ಯವನ್ನು ಇಂದಿನಿಂದ ಪ್ರಾರಂಭಿಸಲಾಗುತ್ತಿದೆ. ಮೂರು–ನಾಲ್ಕು ವರ್ಷಗಳ ಅವಧಿಯಲ್ಲಿ ಎಲ್ಲ ಸಂತ್ರಸ್ತರಿಗೆ ಪರಿಹಾರ ವಿತರಿಸಲಾಗುವುದು ಎಂದರು.

ಇ–ಸ್ವತ್ತು ಸಮಸ್ಯೆ ರಾಜ್ಯದಲ್ಲಿ ಇ–ಸ್ವತ್ತು ಸಮಸ್ಯೆ ಎದುರಾಗಿರುವ ಕುರಿತು ಮಾತನಾಡಿದ ಅವರು, ಸಮಸ್ಯೆಯನ್ನು ಶೀಘ್ರವೇ ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬಿಜೆಪಿ ಆರೋಪಕ್ಕೆ ತಿರುಗೇಟು: ವೈದ್ಯಕೀಯ ಕಾಲೇಜಿಗೆ ಅಡಿಗಲ್ಲು ಇಡುವುದು ಚುನಾವಣಾ ಗಿಮಿಕ್ ಎಂಬ ಬಿಜೆಪಿ ▸▸ 3ನೇ ಪುಟಕ್ಕೆ

## ತ್ರಿಪುರಾಂತೇಶ್ವರ ಸಭಾಭವನಕ್ಕೆ ಶಂಕುಸ್ಥಾಪನೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸುಮಾರು 10 ಲಕ್ಷ ರೂ. ಅನುದಾನದಲ್ಲಿ ನಿರ್ಮಿಸಲಾಗುತ್ತಿರುವ ಶ್ರೀ ತ್ರಿಪುರಾಂತೇಶ್ವರ ಸಭಾಭವನದ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಕಳಕಪ್ಪ ಬಂಡಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ರೋಣ ಮಂಡಳದ ಅಧ್ಯಕ್ಷ ಉಮೇಶ್ ಮಲ್ಲಾಪೂರ, ಬಿ.ಕೆ. ಪೊಲೀಸ್ ಪಾಟೀಲ, ಅಶೋಕ ನವಲಗುಂದ, ಮುತ್ತಣ್ಣ ಕಡಗ, ಶಶಿಧರ ಸಂಕನಗೌಡ್ರ, ರುದ್ರಮುನಿಸ್ವಾಮಿ ಹಿರೇಮಠ, ಶಾಂತಪ್ಪ ಚಿಕ್ಕೊಪ್ಪದ, ನಿಂಗಪ್ಪ ಕಣವಿ, ಗಂಗಾಧರ ಕೋಟಗಿ, ಆನಂದ ಕೋಟಗಿ, ಅಶೋಕ ಬೇವಿನಕಟ್ಟಿ ಮತ್ತು ಯಲ್ಲಪ್ಪ ಮಣ್ಣೊಡ್ಡರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



## ಸರ್ಕಾರಿ ಶಾಲೆಗಳ ಗುಣಮಟ್ಟ ಹೆಚ್ಚಳ: ಶಾಸಕ ಜಿ.ಎಸ್. ಪಾಟೀಲ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಿಂದಿಗಿಂತಲೂ ಈಗ ಸರ್ಕಾರಿ ಶಾಲೆಗಳ ಗುಣಮಟ್ಟ ಹೆಚ್ಚಳವಾಗಿದ್ದು, ಮೂಲಭೂತ ಸೌಕರ್ಯಗಳೊಂದಿಗೆ ಶೈಕ್ಷಣಿಕ ಪ್ರಗತಿಯಲ್ಲಿ ಸರ್ಕಾರಿ ಶಾಲೆಗಳು ಮುಂದುವರಿದಿವೆ ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಸಮೀಪದ ಕೋಟುಮಚಗಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸಾಂಘವಿ ಮೂವರ್ಸ್ ಲಿಮಿಟೆಡ್ ಕಂಪನಿಯ ಸಿ.ಎಸ್.ಆರ್ ಅನುದಾನದಡಿ 15 ಲಕ್ಷ ರೂ. ಮೌಲ್ಯದ ಪಿಠೋಪಕರಣಗಳ ವಿತರಣಾ ಸಮಾರಂಭದಲ್ಲಿ ಮಾತನಾಡಿದರು.

ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಸರ್ಕಾರದೊಂದಿಗೆ ಖಾಸಗಿ ಕಂಪನಿಗಳ ಸಹಕಾರವೂ ಅಗತ್ಯವಾಗಿದೆ. ವಿವಿಧ ಕಂಪನಿಗಳ ಸಿ.ಎಸ್.ಆರ್ ಅನುದಾನವನ್ನು ಶಾಲೆಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಬಳಸಿಕೊಂಡು ಸರ್ಕಾರಿ ಶಾಲೆಗಳನ್ನು ಇನ್ನಷ್ಟು ಬಲಪಡಿಸಲಾಗುತ್ತಿದೆ ಎಂದು ಹೇಳಿದರು.

ಹಿಂದಿನ ಕಾಲದಂತೆ ಶಿಕ್ಷಣ ಪಡೆಯುವುದು ಈಗ ಕಷ್ಟದಾಯಕವಲ್ಲ. ಸರ್ಕಾರ ಶಿಕ್ಷಣ ಕ್ಷೇತ್ರದಲ್ಲಿ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ವಿದ್ಯಾರ್ಥಿಗಳು ಅವುಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆದು ಸಮಾಜದಲ್ಲಿ ಮುಂದುವರಿಯಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಐ.ಎಸ್. ಪಾಟೀಲ, ವಿ.ಬಿ. ಸೋಮನಕಟ್ಟಿ, ಬಸವರಾಜ ನವಲಗುಂದ, ವಿದ್ಯಾಧರ ದೊಡ್ಡಮನಿ, ಪ್ರಕಾಶ ಮುಧೋಳ, ಯಲ್ಲಪ್ಪ ಗುರಿಕಾರ, ಶರಣಪ್ಪ ವ್ಯಾಗೇರಿ, ಮಹಬೂಬಸಾಬ ಘಟ್ಟದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಅದ್ದೂರಿಯಾಗಿ ನಡೆದ "ಬಿ ಜಿ ಎಮ್" ಕನ್ನಡ ಚಿತ್ರದ ಮುಹೂರ್ತ ಸಮಾರಂಭ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶ್ರೀ ಚಕ್ರ ಫಿಲಂಸ್ ಲಾಂಛನದಲ್ಲಿ ನಿರ್ಮಾಣವಾಗುತ್ತಿರುವ ನೂತನ ಕನ್ನಡ ಚಲನಚಿತ್ರ ಬಿ ಜಿ ಎಮ್ ಚಿತ್ರದ ಮುಹೂರ್ತ ಸಮಾರಂಭವು ಬೆಂಗಳೂರಿನ ಸುಪ್ರಸಿದ್ಧ ಶ್ರೀ ಬಂಡೆ ಮಹಾಂಕಾಳಿ ದೇವಸ್ಥಾನದಲ್ಲಿ ನೆರವೇರಿತು.

ಚಿತ್ರದಲ್ಲಿ ಹೊಸ ಕಲಾವಿದರಾದ ದಿನಿ, ಪೂಜಾ ಹಾಗೂ ಮಲ್ಲಿಕಾರ್ಜುನ ಮುಖ್ಯ ಭೂಮಿಕೆಯಲ್ಲಿ ನಟಿಸುತ್ತಿದ್ದಾರೆ. ಜೊತೆಗೆ ವಿಜಯ್ ಚಂಡೂರ್, ರಘು ರಾಮನಕೊಪ್ಪ, ಶಶಿ ಹಾಸನ್, ಪಿಳ್ಳಪ್ಪ, ವೇದಾ ಹಾಸನ್, ಲಕ್ಷಿತಾ ಗಂಗಾವತಿ ಹಾಗೂ ತೇಜಸ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ. ಹೊಸ ಕಲಾವಿದರ ಜೊತೆಗೆ ಹಿರಿಯ ಕಲಾವಿದರೂ ಈ ಚಿತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ಬಿ ಜಿ ಎಮ್ ಚಿತ್ರವು ತ್ರಿಕೋನ ಪ್ರೇಮಕಥೆಯನ್ನು ಆಧಾರವಾಗಿಟ್ಟುಕೊಂಡು ಹೆಣೆಯಲಾಗಿದ್ದು, ರಾಮಾಯಣದ ರಾಮ, ಸೀತೆ ಹಾಗೂ ರಾವಣನ ಮನಸ್ಥಿತಿಗಳನ್ನು ಹಿನ್ನೆಲೆಯಾಗಿ ಇಟ್ಟುಕೊಂಡು ಮದುವೆಯ ಪ್ರಾಮುಖ್ಯತೆಯನ್ನು ವಿಭಿನ್ನವಾಗಿ ಚಿತ್ರಿಸಲಾಗಿದೆ. ಬಳ್ಳಾರಿ ಮೂಲದ ರಮೇಶ್ ಭೀಮರಾಯಪ್ಪ ಅವರು ಚಿತ್ರಕ್ಕೆ ಕಥೆ ಹೆಣೆದು ನಿರ್ದೇಶನ ಮಾಡುತ್ತಿದ್ದಾರೆ.

ಚಿತ್ರಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ಸಾಹಿತ್ಯವನ್ನು ಕಿನ್ನಾಳ್ ರಾಜ್ ಬರೆದಿದ್ದಾರೆ. ಸಂಗೀತವನ್ನು ಆಕಾಶ್ ಪರ್ವ ನೀಡಿದ್ದು, ಛಾಯಾಗ್ರಹಣವನ್ನು ಸುವೀಶ್ ನಿರ್ವಹಿಸುತ್ತಿದ್ದಾರೆ. ಸಂಕಲನವನ್ನು ವೆಂಕಿ ಮಾಡುತ್ತಿದ್ದು, ಯುಡಿವಿ–ಡಿಐ ಕಾರ್ಯವನ್ನು ಕಿಶೋರ್ ನೋಡಿಕೊಳ್ಳುತ್ತಿದ್ದಾರೆ. ಸಿಜಿ ಕಾರ್ಯವನ್ನು ಗುರು ಬೆಳ್ತಂಗಡಿ ಹಾಗೂ ವಿಎಫ್‌ಎಕ್ಸ್ ಕಾರ್ಯವನ್ನು ನಂದು ಜೆ ನಿರ್ವಹಿಸುತ್ತಿದ್ದಾರೆ. ಪತ್ರಿಕಾ ಸಂಪರ್ಕವನ್ನು ಆರ್. ಚಂದ್ರಶೇಖರ್, ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವಿರೇಶ್ ಹಂಡಿಗಿ ವಹಿಸಿಕೊಂಡಿದ್ದಾರೆ.

ಚಿತ್ರದ ಚಿತ್ರೀಕರಣವು ಏಪ್ರಿಲ್ ಮೊದಲ ವಾರದಿಂದ ಕಲ್ಯಾಣ ಕರ್ನಾಟಕದ ಹಲವೆಡೆ, ಬಳ್ಳಾರಿ ಸುತ್ತಮುತ್ತ ಹಾಗೂ ಬೆಂಗಳೂರಿನಲ್ಲಿ ಆರಂಭವಾಗಲಿದೆ.

# ಕಮರುವ ಮುನ್ನವೇ ಚಿವುಟಿ ಹಾಕಬೇಡಿ ಆ ಬಾಲ್ಯದ ಕನಸುಗಳನ್ನು!

ಇಂದಿನ ಆಧುನಿಕ ಯುಗದಲ್ಲಿ ನಾವು ಎಷ್ಟೇ ಪ್ರಗತಿ ಸಾಧಿಸಿದ್ದೇವೆ ಎಂದು ಹೇಳಿಕೊಂಡರೂ, ಸಮಾಜದ ಯಾವುದೋ ಒಂದು ಮೂಲೆಯಲ್ಲಿ 'ಬಾಲ್ಯ ವಿವಾಹ' ಎಂಬ ಸಾಮಾಜಿಕ ಪಿಡುಗು ಇನ್ನೂ ಜೀವಂತವಾಗಿದೆ. ಆಟವಾಡುವ ವಯಸ್ಸಿನಲ್ಲಿ ಹೆಣ್ಣುಮಕ್ಕಳು ಶಿಕ್ಷಣ ಪಡೆಯುವ ಬದಲು ಸಂಸಾರದ ಹೊಣೆ ಹೊರುತ್ತಿರುವುದು ವಿಷಾದನೀಯ ಸಂಗತಿ. ಮಕ್ಕಳ ಉಜ್ವಲ ಭವಿಷ್ಯಕ್ಕೆ ಕೊಳ್ಳಿ ಇಡುವ ಈ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು ಸಮಾಜದ ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ.

ಭಾರತೀಯ ಕಾನೂನಿನ ಪ್ರಕಾರ, ವಿವಾಹವಾಗಲು ಹುಡುಗಿಗೆ ಕನಿಷ್ಠ 18 ವರ್ಷ ಹಾಗೂ ಹುಡುಗನಿಗೆ 21 ವರ್ಷ ತುಂಬಿರಬೇಕು. ಇದಕ್ಕಿಂತ ಕಡಿಮೆ ವಯಸ್ಸಿನಲ್ಲಿ ಮದುವೆ ಮಾಡುವುದು ಶಿಕ್ಷಾರ್ಹ ಅಪರಾಧ. ಬಾಲ್ಯ ವಿವಾಹ ನಿಷೇಧ ಕಾಯ್ದೆ–2006ರ ಅನ್ವಯ, ಮದುವೆ ಮಾಡಿಸುವ ಪೋಷಕರು, ಅದಕ್ಕೆ ಸಹಕರಿಸುವವರು ಹಾಗೂ ವರನಿಗೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸುವ ಅವಕಾಶವಿದೆ. ಬಾಲ್ಯ ವಿವಾಹದಿಂದ ಹೆಣ್ಣುಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆ ಕುಂಠಿತವಾಗುವುದಲ್ಲದೆ, ಅಲ್ಪ ವಯಸ್ಸಿನಲ್ಲಿ ಗರ್ಭಧಾರಣೆ ತಾಯಿ ಹಾಗೂ ಮಗುವಿನ ಜೀವಕ್ಕೂ ಅಪಾಯಕಾರಿಯಾಗಿದೆ.

ಸಮಾಜದಲ್ಲಿ ಆಳವಾಗಿ ಬೇರೂರಿರುವ ಈ ಪಿಡುಗನ್ನು ನಿರ್ಮೂಲನೆ ಮಾಡಲು ಕೇವಲ ಕಾನೂನು ಕ್ರಮಗಳು ಸಾಲದು. ಜನರಲ್ಲಿ ಜಾಗೃತಿ ಮೂಡಿಸುವ ಕೆಲಸವೂ ಅಗತ್ಯ. ಇದೇ ಉದ್ದೇಶದಿಂದ ಗದಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಅವರು ವಿಶಿಷ್ಟ ಹೆಜ್ಜೆ ಇಟ್ಟಿದ್ದಾರೆ.




ವ್ಯಂಗ್ಯಚಿತ್ರಗಳ ಮೂಲಕ ಬಾಲ್ಯ ವಿವಾಹ ವಿರುದ್ಧ ಜಾಗೃತಿ ಮೂಡಿಸುತ್ತಿರುವ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ

ತಮ್ಮ ಆಡಳಿತಾತ್ಮಕ ಜವಾಬ್ದಾರಿಗಳ ನಡುವೆ ಕಲಾತ್ಮಕ ಹವ್ಯಾಸವನ್ನು ಬೆಳೆಸಿಕೊಂಡಿರುವ ಅವರು, ಸ್ವತಃ ರಚಿಸಿದ ವ್ಯಂಗ್ಯಚಿತ್ರಗಳ ಮೂಲಕ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ. ಡಾ. ನಂದಾ ಅವರು ರಚಿಸಿರುವ ಪ್ರತಿಯೊಂದು ಚಿತ್ರವೂ ಒಂದು ಗಂಭೀರ ಸಂದೇಶವನ್ನು ಹೊತ್ತು ತರುತ್ತದೆ.

ಒಂದು ಚಿತ್ರದಲ್ಲಿ "ಬಾಲ್ಯ ವಿವಾಹ ನಿಲ್ಲಿಸಿ, ಮಕ್ಕಳಿಗೆ ಶಿಕ್ಷಣ ಕೊಡಿಸಿ" ಎಂಬ ಸಂದೇಶದೊಂದಿಗೆ, ಮಗುವಿನ ಕೈಯಲ್ಲಿ ಆಟದ ಬೊಮ್ಮೆಯ ಬದಲು ಪುಸ್ತಕವಿರಬೇಕು ಎಂಬ ಅರ್ಥವನ್ನು ಮನಮುಟ್ಟುವ ರೀತಿಯಲ್ಲಿ ಚಿತ್ರಿಸಿದ್ದಾರೆ. ಮತ್ತೊಂದು ಚಿತ್ರದಲ್ಲಿ "ಮತದಾನಕ್ಕೆ ವಯಸ್ಸು ಬೇಕು, ಕೆಲಸಕ್ಕೆ ವಯಸ್ಸು ಬೇಕು – ಆದರೆ ಮದುವೆಗೆ ಮಾತ್ರ ಏಕೆ ಬೇಗ?" ಎಂಬ ಪ್ರಶ್ನೆಯನ್ನು ಸಮಾಜದ ಮುಂದೆ ಇಟ್ಟಿದ್ದಾರೆ. ಈ ಮೂಲಕ ಮಗುವಿನ ಅಮಾಯಕತೆಯನ್ನು ಮನಮುಟ್ಟುವ ರೀತಿಯಲ್ಲಿ ಚಿತ್ರಗಳಲ್ಲಿ ಕಟ್ಟಿಕೊಡಲಾಗಿದೆ.

ಮಗು ಹೂವಿನಂತೆ ಅರಳಬೇಕೇ ಹೊರತು ಮದುವೆ ಎಂಬ ಬೇಡದ ಸರಪಳಿಯಲ್ಲಿ ಬಂಧಿಯಾಗಬಾರದು ಎಂಬುದು ಅವರ ಚಿತ್ರಗಳ ಮುಖ್ಯ ಆಶಯವಾಗಿದೆ.

ಕೇವಲ ಕಚೇರಿ ಕಡತಗಳಿಗೆ ಸೀಮಿತವಾಗದ ಈ ಕಲೆ, ಜಿಲ್ಲೆಯ ವಸತಿ ನಿಲಯಗಳು ಹಾಗೂ ಶಾಲೆಗಳಲ್ಲಿ ಪ್ರದರ್ಶನಗೊಳ್ಳುತ್ತಿದೆ. ದೃಶ್ಯ ಮಾಧ್ಯಮವು ಮಕ್ಕಳ ಮನಸ್ಸಿನ ಮೇಲೆ ಬೇಗ ಪರಿಣಾಮ ಬೀರುವುದರಿಂದ, ಈ ಕಾರ್ಟೂನ್ ಚಿತ್ರಗಳು ವಿದ್ಯಾರ್ಥಿಗಳಲ್ಲಿ ಬಾಲ್ಯ ವಿವಾಹದ ದುಷ್ಪರಿಣಾಮಗಳ ಬಗ್ಗೆ ಸ್ಪಷ್ಟ ಅರಿವು ಮೂಡಿಸುತ್ತಿವೆ.

ಒಬ್ಬ ಉನ್ನತ ಅಧಿಕಾರಿಯಾಗಿ ಈ ರೀತಿಯ ಸಾಮಾಜಿಕ ಕಳಕಳಿ ತೋರಿಸುತ್ತಿರುವುದು ಶ್ಲಾಘನೀಯ. ಡಾ. ನಂದಾ ಹಣಬರಟ್ಟಿ ಅವರ ಈ "ಕುಂಚದ ಕ್ರಾಂತಿ" ಬಾಲ್ಯ ವಿವಾಹ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರೇರಣೆಯಾಗಿದೆ. ಅಧಿಕಾರ ಮತ್ತು ಕಲೆ ಒಂದಾಗಿದಾಗ ಸಮಾಜದ ಅಂಕುಡೊಂಕುಗಳನ್ನು ತಿದ್ದಲು ಸಾಧ್ಯ ಎಂಬುದಕ್ಕೆ ಇವರ ಕಾರ್ಯವೇ ಸಾಕ್ಷಿಯಾಗಿದೆ.

ಅಧಿಕಾರಿಗಳ ಇಂತಹ ಮಾನವೀಯ ಮತ್ತು ಕಲಾತ್ಮಕ ಧೋರಣೆಗಳು ಇಲಾಖೆ ಮತ್ತು ಸಾರ್ವಜನಿಕರ ನಡುವಿನ ಅಂತರವನ್ನು ಕಡಿಮೆಗೊಳಿಸಿ, ಉತ್ತಮ ಸಮಾಜ ನಿರ್ಮಾಣಕ್ಕೆ ದಾರಿದೀಪವಾಗುತ್ತವೆ.

"ಮಗು ಬೆಳೆಯಲಿ, ಓದಲಿ, ಆಡಲಿ – ಬಾಲ್ಯ ವಿವಾಹದ ಬೇಡಿ ಕಳಚಲಿ."

ಒಂದು ಹೆಣ್ಣುಮಗು ಸುಶಿಕ್ಷಿತಳಾದರೆ ಒಂದು ಕುಟುಂಬವೇ ಸುಶಿಕ್ಷಿತವಾಗುತ್ತದೆ. ಬಾಲ್ಯ ವಿವಾಹ ಮುಕ್ತ ಸಮಾಜ ನಿರ್ಮಾಣ ಮಾಡುವುದು ಕೇವಲ ಸರ್ಕಾರದ ಜವಾಬ್ದಾರಿಯಲ್ಲ; ಅದು ಪ್ರತಿಯೊಬ್ಬ ನಾಗರಿಕನ ಹೊಣೆಗಾರಿಕೆಯಾಗಿದೆ.

**ಬನ್ನಿ, ಮಕ್ಕಳ ಕನಸುಗಳಿಗೆ ರೆಕ್ಕೆ ನೀಡೋಣ ಅವರ ಬಾಲ್ಯವನ್ನು ಉಳಿಸೋಣ.**

### ಧರ್ಮ, ಸತ್ಯ ಮತ್ತು ಶ್ರಮ ಜೀವನದ ಬೆಳಕಿನ ಮೂಲ: ರಂಭಾಪುರಿ ಶ್ರೀ

## ಶಖಾಪುರ ತಪೋವನ ಮಠದಲ್ಲಿ 75ನೇ ಜಾತ್ರಾ ಮಹೋತ್ಸವ – ಜನಜಾಗೃತಿ ಧರ್ಮ ಸಮಾರಂಭದಲ್ಲಿ ಜಗದ್ಗುರುಗಳ ಸಂದೇಶ



"ಮಾನವನ ಬದುಕಿಗೆ ಧರ್ಮ, ಸತ್ಯ ಮತ್ತು ಶ್ರಮವೇ ಬೆಳಕಿನ ಮೂಲ. ಆಧ್ಯಾತ್ಮದ ಜ್ಞಾನವಿಲ್ಲದೆ ಜೀವನ ಸಂಪೂರ್ಣವಾಗುವುದಿಲ್ಲ."
– ಡಾ. ವೀರಸೋಮೇಶ್ವರ ಜಗದ್ಗುರುಗಳು, ರಂಭಾಪುರಿ ಪೀಠ

### ಅಡ್ಡಪಲ್ಲಕ್ಕಿ ಮಹೋತ್ಸವಕ್ಕೆ ಭಕ್ತರ ಸಾಗರ

ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವವು ಸಂಭ್ರಮದಿಂದ ಜರುಗಿತು. ಸಮಾರಂಭಕ್ಕೂ ಮುನ್ನ ಶ್ರೀ ವಿಶ್ವಾರಾಧ್ಯ–ಬಸವಾಂಬೆಯರ ಜೋಡು ರಥ ಸಂಭ್ರಮದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ಭಕ್ತಿಪೂರ್ವಕವಾಗಿ ಸಾಗಿದರು.

■ವಿಜಯಸಾಕ್ಷಿ ಸುದ್ದಿ, ಜೇವರ್ಗಿ

ಮಾನವನ ಉಸಿರಾಟಕ್ಕೆ ಗಾಳಿ ಎಷ್ಟು ಅಗತ್ಯವೋ, ಜೀವನದ ಉಜ್ವಲ ಭವಿಷ್ಯಕ್ಕೆ ಮಹಾತ್ಮರ ಮಾರ್ಗದರ್ಶನವೂ ಅಷ್ಟೇ ಅಗತ್ಯ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಶಖಾಪುರ ತಪೋವನ ಮಠದ 75ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಕೆಡಕುಗಳನ್ನು ಮೆಟ್ಟಿ ನಿಂತು ಒಳಿತಿನತ್ತ ಹೆಜ್ಜೆ ಹಾಕುವುದು ಮಾನವನ ಗುರಿಯಾಗಬೇಕು. ಭೌತಿಕ ಬದುಕಿಗೆ ಆಧ್ಯಾತ್ಮದ ಜ್ಞಾನ ಅಗತ್ಯ. ಧರ್ಮದಿಂದ ವಿಮುಖನಾದರೆ ಜೀವನ ಅಶಾಂತಿಯತ್ತ ಸಾಗುತ್ತದೆ. ಜೀವನವು ಇನ್ನೊಬ್ಬರಿಗೆ ಮಾದರಿಯಾಗಬೇಕೇ ಹೊರತು ಮಾರಕವಾಗಬಾರದು ಎಂದು ಅವರು ಹೇಳಿದರು.

ಶ್ರೀ ಜಗದ್ಗುರು ವಿದ್ವತ್ ಚಿಂತನಗಳು ಹಾಗೂ ಶ್ರೀ ರೇಣುಕಾಚಾರ್ಯರ ಜೀವನ ದರ್ಶನವು ಬದುಕಿಗೆ ದಿಕ್ಸೂಚಿಯಾಗಿದೆ. ತಪೋವನ ಮಠದ ಡಾ. ಸಿದ್ಧರಾಮ ಶಿವಾಚಾರ್ಯ ಸ್ವಾಮಿಗಳ ಕ್ರಿಯಾಶೀಲ ಬದುಕು ಮಠದ ಅಭಿವೃದ್ಧಿಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ಮಾತನಾಡಿ, ಧರ್ಮ ಸಮಾರಂಭಗಳು ಭಾರತೀಯ ಸಂಸ್ಕೃತಿಗೆ ದಾರಿದೀಪವಾಗಿವೆ. ಸ್ವಧರ್ಮದ ಪರಿಪಾಲನೆ ಮತ್ತು ಅನ್ಯ ಧರ್ಮದವರೊಂದಿಗೆ ಸದ್ಭಾವನೆಯುಳ್ಳ ಜೀವನದಿಂದಲೇ ಈ ಭೂಮಿ ಸ್ವರ್ಗವಾಗುತ್ತದೆ ಎಂದು ಹೇಳಿದರು.

ಶಖಾಪುರ ತಪೋವನ ಮಠದ ಡಾ. ಸಿದ್ಧರಾಮ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸತ್ಯ, ಶಾಂತಿ ಮತ್ತು ಒಳ್ಳೆಯ ಮಾತುಗಳ ಮಹತ್ವವನ್ನು ಒತ್ತಿ ಹೇಳಿದರು. ಪೂರ್ವಾಚಾರ್ಯರ ಆಧ್ಯಾತ್ಮ ಚಿಂತನೆಗಳು ಜೀವನದ ಭಾಗ್ಯೋದಯಕ್ಕೆ ಕಾರಣವಾಗಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀ ವಿಶ್ವಾರಾಧ್ಯ–ಬಸವಾಂಬೆಯರ ಜೋಡು ರಥೋತ್ಸವ ಭಕ್ತಿಭಾವದಿಂದ ಜರುಗಿದ್ದು, ಭಕ್ತರಲ್ಲಿ ಹೊಸ ಚೈತನ್ಯ ಮೂಡಿಸಿತು.

ಸಭೆಯಲ್ಲಿ ಮಾಜಿ ಶಾಸಕ ರಾಜಕುಮಾರ್ ಪಾಟೀಲ್, ಕಡಕೋಳ ಮಡಿವಾಳೇಶ್ವರ ಮಠದ ಡಾ. ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು, ಬೆಳಗುಂಪ ಹಿರೇಮಠದ ಅಭಿನವ ಪರ್ವತೇಶ್ವರ ಶಿವಾಚಾರ್ಯ ಸ್ವಾಮಿಗಳು, ಕುಳೆಕುಮಟಗಿ ಗುರುಸ್ವಾಮಿ ಶರಣರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ವಿಶ್ವ ಬಸವಾಂಬೆ ಪ್ರಶಸ್ತಿಗಳನ್ನು ಗಂಜಿಹಾಳ ಲಿಂಗಯ್ಯ ಸ್ವಾಮಿ, ಡಾ. ಶರಣಬಸಪ್ಪ ಕಾಮರೆಡ್ಡಿ, ಪ್ರಶಾಂತ್ ಕೆರಿ ಬೆಣ್ಣೂರು, ಶಾಂತಕುಮಾರ್ ಪಾಟೀಲ್ ಕೊಡ್ಲಾ ಹಾಗೂ ವೀರೇಶ್ ಶೆಟ್ಟಿ ಅವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಪ್ರದಾನ ಮಾಡಿ ಶುಭಾಶಯ ಕೋರಿದರು.

## ಹಿರೇಮಲ್ಲಾಪುರದಲ್ಲಿ 50 ಎಕರೆ ಜಮೀನು ಖರೀದಿ ಯತ್ನ: ಎಥೆನಾಲ್ ಕಾರ್ಖಾನೆ ವಿರುದ್ಧ ಆರೋಪ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಹಿರೇಮಲ್ಲಾಪುರ ಗ್ರಾಮದಲ್ಲಿ ಎಥೆನಾಲ್ ಕಾರ್ಖಾನೆಯವರು ತಮ್ಮ ಸಂಬಂಧಿಕರ ಹೆಸರಿನಲ್ಲಿ ಸುಮಾರು 50 ಎಕರೆ ಜಮೀನು ಖರೀದಿಸಲು ಮುಂದಾಗಿರುವುದು ಗ್ರಾಮಸ್ಥರಲ್ಲಿ ಅನುಮಾನಕ್ಕೆ ಕಾರಣವಾಗಿದೆ. ಈ ಭೂಮಿಯನ್ನು ಕಾರ್ಖಾನೆಗೆ ಬಳಸಲಿದ್ದಾರೆಯೇ ಅಥವಾ ವೈಯಕ್ತಿಕ ಉಳುಮೆಗಾಗಿ ಖರೀದಿಸುತ್ತಿದ್ದಾರೆಂಬುದನ್ನು ಸ್ಪಷ್ಟಪಡಿಸಬೇಕು ಎಂದು ಜಯಕರ್ನಾಟಕ ಸಂಘಟನೆ ತಾಲೂಕ ಅಧ್ಯಕ್ಷ ಇಸ್ಮಾಯಿಲ್ ಆಡೂರ, ಪ್ರಕಾರ್ಯದರ್ಶಿ ಹಾಲಪ್ಪ ಬಂಡಾರಿ ಹಾಗೂ ತಾಲೂಕ ಸಂಚಾಲಕ ರಮೇಶ್ ಹಂಗನಕಟ್ಟಿ ಆಗ್ರಹಿಸಿದರು.

ಈ ಕುರಿತು ಶುಕ್ರವಾರ ಪಟ್ಟಣದಲ್ಲಿ ತಹಸೀಲ್ದಾರ ಧನಂಜಯ ಎಂ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಕಂಪನಿಯ ವಿರುದ್ಧ ಕಳೆದ ಕೆಲವು ದಿನಗಳಿಂದ ಸಾರ್ವಜನಿಕರು ಹಾಗೂ ವಿವಿಧ ಕನ್ನಡಪರ ಸಂಘಟನೆಗಳು ಹೋರಾಟ ನಡೆಸುತ್ತಿವೆ. ಗ್ರಾಮದ ಸಮೀಪದ 36 ಎಕರೆ ಭೂಮಿಯಲ್ಲಿ ಕಾರ್ಖಾನೆ ನಿರ್ಮಾಣ ನಡೆಯುತ್ತಿದ್ದು, ಸ್ಥಳೀಯರ ವಿರೋಧದ ನಡುವೆಯೂ ಕಾರ್ಯ ಮುಂದುವರಿದಿದೆ ಎಂದು ಆರೋಪಿಸಿದರು.

ಕಾರ್ಖಾನೆ ಆರಂಭವಾದರೆ ಪರಿಸರ ಮಾಲಿನ್ಯ ಉಂಟಾಗಿ ಗ್ರಾಮಸ್ಥರಿಗೆ ಆರೋಗ್ಯ ಸಮಸ್ಯೆಗಳು ಎದುರಾಗುವ ಸಾಧ್ಯತೆ ಇದೆ. ಅಲ್ಲದೆ ಹತ್ತಿರದಲ್ಲೇ ಸರ್ಕಾರಿ ಶಾಲೆ ಇರುವುದನ್ನೂ ಪರಿಗಣಿಸದೆ ಕಾರ್ಖಾನೆ ನಿರ್ಮಾಣಕ್ಕೆ ಮುಂದಾಗಿರುವುದು ಆತಂಕಕಾರಿ ಎಂದು ಹೇಳಿದರು.

ಈ ಕಾರ್ಖಾನೆಯಿಂದ ಗ್ರಾಮದ ರೈತರ ಜಮೀನುಗಳಿಗೆ ಹಾನಿಯಾಗುವ ಭೀತಿ ಇದೆ. ಇದರ ಮಧ್ಯೆ ಮತ್ತಷ್ಟು 50 ಎಕರೆ ಜಮೀನು ಖರೀದಿಸಲು ಮುಂದಾಗಿರುವುದು ಯಾವ ಕಾರಣಕ್ಕಾಗಿ ಎಂಬುದನ್ನು ಅಧಿಕಾರಿಗಳು ಸ್ಪಷ್ಟಪಡಿಸಬೇಕು. ಈಗ ಖರೀದಿಸಲು ಉದ್ದೇಶಿಸಿರುವ ಜಮೀನಿನ ಖಾತೆ ಬದಲಾವಣೆ ಮಾಡಬಾರದು. ಒಂದು ವೇಳೆ ಖಾತೆ ಬದಲಾವಣೆ ನಡೆದರೆ ಜಯಕರ್ನಾಟಕ ಸಂಘಟನೆ ಹಾಗೂ ವಿವಿಧ ಕನ್ನಡಪರ ಸಂಘಟನೆಗಳು ಗ್ರಾಮಸ್ಥರೊಂದಿಗೆ ಉಗ್ರ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ತಾಲೂಕ ಗೌರವಾಧ್ಯಕ್ಷ ಇಶಾಕ್‌ಭಾಷಾ ಹರಪನಹಳ್ಳಿ, ನಾಗರಾಜ ಉಪ್ಪಾರ, ಯಲ್ಲಪ್ಪ ಹಂಜಗಿ, ಬಸವರಾಜ ಮೆಲ್ಮುರಿ, ಶಾಹೀದ್ ಉಳ್ಳಟ್ಟಿ, ಅಬ್ದುಲ್ ಕರೀಂ, ಎ.ಎಂ. ಕೊಪ್ಪಳ, ಮಂಜುನಾಥ ಶಿರಹಟ್ಟಿ, ಬಸಣ್ಣ ಮೂಕಿ, ಮೈನು ಮೊಮಿನ್, ಜಗದೀಶ ತಳವಾರ, ಮಲ್ಲು ಕಡಕೋಳ, ಹನುಮಂತಪ್ಪ ಬೆಟಗೇರಿ, ಮಾದೇವಪ್ಪ ತಳವಾರ, ಹನುಮಂತ ಕಿಳ್ಳಿಕ್ಯಾತರ ಸೇರಿದಂತೆ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

## ಹಗರಿಬೊಮ್ಮನಹಳ್ಳಿಯಲ್ಲಿ ಕುಡಿಯುವ ನೀರಿನ ಅರವಟ್ಟಿಗೆ ಉದ್ಘಾಟನೆ




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಸಮಾಜ ಸೇವಕ ನಾಗಭೂಷಣ ಗದ್ದಿಕೇರಿ ಅವರು ತಮ್ಮ ತಾಯಿಯ ಸ್ಮರಣಾರ್ಥವಾಗಿ ಪ್ರತಿವರ್ಷ ಆಯೋಜಿಸುತ್ತಿರುವ ಕುಡಿಯುವ ನೀರಿನ ಅರವಟ್ಟಿಗೆ ಕಾರ್ಯಕ್ರಮದ 8ನೇ ವರ್ಷದ ಉದ್ಘಾಟನಾ ಸಮಾರಂಭ ಶನಿವಾರ ಸಂಜೆ ಪಟ್ಟಣದ ಬೈಪಾಸ್ ಸರ್ಕಲ್, ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಹಾಗೂ ವಾಲ್ಮೀಕಿ ಸರ್ಕಲ್‌ನಲ್ಲಿ ನಡೆಯಿತು.

ಬೇಸಿಗೆ ಕಾಲದಲ್ಲಿ ಸಾರ್ವಜನಿಕರಿಗೆ ತಂಪು ಕುಡಿಯುವ ನೀರು ದೊರಕುವಂತೆ ಮಾಡುವ ಉದ್ದೇಶದಿಂದ ಈ ಅರವಟ್ಟಿಗೆಯನ್ನು ಪ್ರತಿವರ್ಷ ಆಯೋಜಿಸಲಾಗುತ್ತಿದೆ. ಕಾರ್ಯಕ್ರಮವನ್ನು ನಂದೀಪುರದ ಡಾ. ಮಹೇಶ್ವರ ಸ್ವಾಮೀಜಿ ಹಾಗೂ ಉತ್ತಂಗಿ ಸೋಮಶಂಕರ ಜಗದ್ಗುರು ಮಹಾಸ್ವಾಮೀಜಿ ಉದ್ಘಾಟಿಸಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಚೆನ್ನಪ್ಪ, ಶಿವರಾಮ ರೆಡ್ಡಿ, ಮಂಜುನಾಥ, ಶಿವರಾಜ್, ರಾಘವೇಂದ್ರ ಸೇರಿದಂತೆ ಹಲವಾರು ಗಣ್ಯರು ಹಾಗೂ ಸ್ಥಳೀಯ ನಾಗರಿಕರು ಭಾಗವಹಿಸಿದ್ದರು.

ಬೇಸಿಗೆ ಸಂದರ್ಭದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡುತ್ತಿರುವ ನಾಗಭೂಷಣಸ್ವಾಮಿ ಗದ್ದಿಕೇರಿ ಅವರ ಸಮಾಜಮುಖಿ ಕಾರ್ಯಕ್ಕೆ ಸ್ಥಳೀಯರು ಹಾಗೂ ಸ್ನೇಹಿತರು ಮೆಚ್ಚುಗೆ ವ್ಯಕ್ತಪಡಿಸಿದರು.

### 20ನೇ ವಾರ್ಡಿನ ಸದಸ್ಯೆ ನೇತ್ರಾವತಿ ಹುಚ್ಚಪ್ಪ ಸೆರಗಾರ್ ಆಯ್ಕೆ – ಕಾಂಗ್ರೆಸ್ ಬಹುಮತದ ನಡುವೆ ಅಧಿಕಾರ ಹಂಚಿಕೆ

# ಪುರಸಭೆ ಉಪಾಧ್ಯಕ್ಷೆಯಾಗಿ ನೇತ್ರಾವತಿ ಸೆರಗಾರ್ ಅವಿರೋಧ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಪುರಸಭೆಯ ಉಪಾಧ್ಯಕ್ಷೆಯಾಗಿ ರೈತರ ಓಣಿಯ 20ನೇ ವಾರ್ಡ್ ಸದಸ್ಯೆಯಾದ ನೇತ್ರಾವತಿ ಹುಚ್ಚಪ್ಪ ಸೆರಗಾರ್ ಅವಿರೋಧವಾಗಿ ಆಯ್ಕೆಯಾದರು.

ಒಟ್ಟು 23 ಸದಸ್ಯರ ಬಲದ ಪುರಸಭೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಹುಮತವಿದ್ದು, ಉಪಾಧ್ಯಕ್ಷ ಸ್ಥಾನ ಪರಿಶಿಷ್ಟ ಪಂಗಡ ಮಹಿಳೆಗೆ ಮೀಸಲಾಗಿತ್ತು. ಕಾಂಗ್ರೆಸ್ ಪಕ್ಷದಲ್ಲಿ ಈ ವರ್ಗದ ಇಬ್ಬರು ಸದಸ್ಯರು ಇದ್ದುದರಿಂದ ಅಧಿಕಾರ ಹಂಚಿಕೆಯಂತೆ ಮೊದಲ ಅವಧಿಗೆ ಅಂಬಿಕಾ ದೇವೇಂದ್ರಪ್ಪ ಉಪಾಧ್ಯಕ್ಷರಾಗಿದ್ದರು. ಇದೀಗ ಎರಡನೇ ಅವಧಿಗೆ ನೇತ್ರಾವತಿ ಸೆರಗಾರ್ ಆಯ್ಕೆಯಾಗಿದ್ದಾರೆ. ಚುನಾವಣೆ ಪ್ರಕ್ರಿಯೆಯಲ್ಲಿ 18 ಸದಸ್ಯರು ಹಾಜರಿದ್ದು, ಸಹಾಯಕ ಆಯುಕ್ತರಾದ ವಿವೇಕಾನಂದ ಚುನಾವಣಾಧಿಕಾರಿಯಾಗಿ ಹಾಗೂ ಪುರಸಭೆಯ ಮುಖ್ಯಾಧಿಕಾರಿ ಎಂ.ಕೆ. ಮುಗಳಿ ಸಹಾಯಕ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು.



ಈ ಸಂದರ್ಭದಲ್ಲಿ ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಬಾನಮ್ಮ, ತಾಲೂಕು ಅಧ್ಯಕ್ಷೆ ಯಶೋಧ ಮಂಜುನಾಥ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿ ಗೋಣಿಬಸಪ್ಪ, ಪುರಸಭೆ ಅಧ್ಯಕ್ಷ ಮರಿ ರಾಮಪ್ಪ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಪುರಸಭೆ ಸದಸ್ಯರಾದ ಎಲ್. ಗಣೇಶ್, ಅಜೀಉಲ್ಲಾ, ಟಿ. ಇಸ್ಮಾಯಿಲ್, ಬಿಡಿ ಗಂಗಣ್ಣ, ನಾಗರಾಜ್ ಜನ್ನು, ದೀಪಕ್ ಸಾ ಕಠಾರೆ, ಬೋವಿ ವೀರಣ್ಣ, ರಾಜೇಶ್ ಬ್ಯಾಡಗಿ, ರೇಷ್ಮಾ ಸಿಕಂದರ್, ಖಾಜಾ ಬನ್ನಿ

"ಪುರಸಭೆಯ ಅಭಿವೃದ್ಧಿ ಹಾಗೂ ಸಾರ್ವಜನಿಕ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಎಲ್ಲ ಸದಸ್ಯರ ಸಹಕಾರದೊಂದಿಗೆ ಕೆಲಸ ಮಾಡುತ್ತೇನೆ."
– **ನೇತ್ರಾವತಿ ಹುಚ್ಚಪ್ಪ ಸೆರಗಾರ್**, ನೂತನ ಉಪಾಧ್ಯಕ್ಷರು.

ಅಲ್ಲಭಕ್ಷಿ, ಎಚ್.ಎಂ. ಚೆನ್ನಮ್ಮ ವಿಜಯಕುಮಾರ್, ಅಂಬಿಕಾ ದೇವೇಂದ್ರಪ್ಪ, ಮಂಜುಳಾ ಕೃಷ್ಣ ನಾಯ್ಕ ಸೇರಿದಂತೆ ನಾಮನಿರ್ದೇಶಿತ ಸದಸ್ಯರಾದ ಬಾರಿಕರ ಮಂಜುನಾಥ್, ಬಡವಡಿಕೆ ಕೃಷ್ಣಪ್ಪ, ಯು. ಬಾಳಪ್ಪ, ತ್ಯಾವಣಿಗೆ ಕೊಟ್ರೇಶ್ ಹಾಗೂ ರೈತರ ಓಣಿಯ ಮುಖಂಡರು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಾ.19ರಂದು ವೀರಭದ್ರೇಶ್ವರ ಜಾತ್ರಾ ಮಹೋತ್ಸವ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ನಿಡಗುಂದಿ ಗ್ರಾಮದ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಜಾತ್ರಾ ಮಹೋತ್ಸವದ ಅಂಗವಾಗಿ ಮಹಾರಥೋತ್ಸವವು ಮಾರ್ಚ್ 19ರಂದು ಸಂಜೆ 6 ಗಂಟೆಗೆ ಭಕ್ತಿಭಾವದಿಂದ ಜರುಗಲಿದೆ ಎಂದು ದೇವಸ್ಥಾನ ಟ್ರಸ್ಟ್ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

ಜಾತ್ರಾ ಮಹೋತ್ಸವದ ಕಾರ್ಯಕ್ರಮಗಳು ಮಾರ್ಚ್ 18ರಿಂದ ಆರಂಭವಾಗಲಿವೆ. ಆ ದಿನ ಬೆಳಗ್ಗೆ ರಜತ ಕಳಸದ ಮೆರವಣಿಗೆ ನಡೆಯಲಿದ್ದು, ಮಧ್ಯಾಹ್ನ 12 ಗಂಟೆಗೆ ಗುರು-ಲಿಂಗ, ಜಂಗಮರ ಪಾದಪೂಜೆ ಹಾಗೂ ಮಹಾಗಣಾರಾಧನೆ ನಡೆಯಲಿದೆ.

ಮಾರ್ಚ್ 19ರಂದು ಬೆಳಗ್ಗೆ 6 ಗಂಟೆಗೆ ರುದ್ರಾಭಿಷೇಕ, ಬೆಳಗ್ಗೆ 8 ಗಂಟೆಗೆ ಸಕಲ ವಾದ್ಯಗಳೊಂದಿಗೆ ಶ್ರೀ ವೀರಭದ್ರೇಶ್ವರ ಮಹಾ ಗುಗ್ಗಳ ಕಾರ್ಯಕ್ರಮ ಜರುಗಲಿದೆ. ಬೆಳಗ್ಗೆ 9 ಗಂಟೆಗೆ ಸೌಖ್ಯದ ಆಸ್ಪತ್ರೆ, ಗದಗ ವತಿಯಿಂದ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ.

ಅದೇ ದಿನ ಸಂಜೆ 4 ಗಂಟೆಗೆ ಮಹಾರಥದ ಹಗ್ಗ ಹಾಗೂ ರುದ್ರಾಕ್ಷಿ ಮಾಲೆಯ ಮೆರವಣಿಗೆ ನಡೆಯಲಿದ್ದು, ಅಭಿನವ ಚನ್ನಬಸವ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಸಂಜೆ 6 ಗಂಟೆಗೆ ಮಹಾರಥೋತ್ಸವ ಜರುಗಲಿದೆ. ಇದೇ ವೇಳೆ ಮಾರ್ಚ್ 20ರಂದು ಸಂಜೆ 6 ಗಂಟೆಗೆ ಕಡಬಿನ ಕಾಳಗ ಕಾರ್ಯಕ್ರಮವೂ ನಡೆಯಲಿದೆ ಎಂದು ಟ್ರಸ್ಟ್ ಕಮಿಟಿ ತಿಳಿಸಿದೆ.

**ಮಹಿಳಾ ಕೈಗಾರಿಕೆಗಳ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳ - ಸಾಧಕಿಯರಿಗೆ ಸನ್ಮಾನ**

# ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಮಹಿಳಾ ಘಟಕದ 50ನೇ ಸುವರ್ಣ ಮಹೋತ್ಸವ ನಾಳೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ 50ನೇ ಸುವರ್ಣ ಮಹೋತ್ಸವ ಹಾಗೂ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಾರ್ಚ್ 16ರಂದು "ಮಹಿಳಾ ಕೈಗಾರಿಕೆಗಳಿಂದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ-2026" ಅನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ ದಾನಪ್ಪಗೌಡ್ರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳಾ ಉದ್ಯಮಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಮಾ.16ರಂದು ಬೆಳಗ್ಗೆ 10.30ಕ್ಕೆ ಗದಗ ಎ.ಪಿ.ಎಂ.ಸಿ. ಯಾರ್ಡ್‌ನಲ್ಲಿರುವ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಕಾರ್ಯಕ್ರಮ ಜರುಗಲಿದೆ.

ಶಿರಹಟ್ಟಿಯ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಲಿದ್ದು, ಆಶೀರ್ವಚನ ನೀಡಲಿದ್ದಾರೆ. ಬೆಂಗಳೂರಿನ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆಯ ಅಧ್ಯಕ್ಷೆ ಉಮಾ ರೆಡ್ಡಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಗದಗ ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪ ನಿರ್ದೇಶಕಿ ಪದ್ಮಾವತಿ ಜಿ. ಹಾಗೂ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಮಹಿಳೆಯರು ತಯಾರಿಸಿದ ವಿವಿಧ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟ ಮೇಳ ನಡೆಯಲಿದ್ದು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನೂ ಆಯೋಜಿಸಲಾಗಿದೆ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಪೂರ್ಣಿಮಾ ಆಟದ, ಪಾರ್ವತಿ ಶಾಬಾದಿಮಠ, ಸುವರ್ಣ ಮದರಿಮಠ, ರೇಣುಕಾ ಅಮಾತ್ಯ, ಶಿಲ್ಪಾ ವೀರಲಿಂಗಯ್ಯನಮಠ, ಸುಧಾ ಹುಣಸಿಕಟ್ಟಿ, ಸುಜಾತಾ ಗುಡಿಮನಿ ಮತ್ತಿತರರು ಉಪಸ್ಥಿತರಿದ್ದರು.

### ಸಾಧಕಿಯರಿಗೆ ಸನ್ಮಾನ

ಕಾರ್ಯಕ್ರಮದಲ್ಲಿ ಯಶಸ್ವಿ ಮಹಿಳಾ ಉದ್ಯಮಿಗಳಾದ ಸಹನಾ ಟ್ರೇಡರ್ಸ್‌ನ ಸುವರ್ಣ ಮದರಿಮಠ ಹಾಗೂ ಓಂಕಾರ ಅಸೋಸಿಯೇಟ್ಸ್‌ನ ಸುನೀತಾ ಕೆ. ಪಾಟೀಲ ಅವರನ್ನು ಸನ್ಮಾನಿಸಲಾಗುವುದು. ಜೊತೆಗೆ ಸಮಾಜದ ಏಳಿಗೆಗಾಗಿ ಶ್ರಮಿಸುತ್ತಿರುವ ಪೌರ ಕಾರ್ಮಿಕರು, ಕ್ರೀಡಾಪಟುಗಳು ಹಾಗೂ ಮಹಿಳಾ ಕಾರ್ಮಿಕರಿಗೂ ವಿಶೇಷ ಸನ್ಮಾನ ಏರ್ಪಡಿಸಲಾಗಿದೆ.

# ಮಾ.19ರಂದು ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ



ಹುಬ್ಬಳ್ಳಿಯ ತಿರುಮಲಕೊಪ್ಪದಲ್ಲಿ ಮಾರ್ಚ್ 19 ರಂದು ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಮತ್ತು ಶ್ರೀ ರೇಣುಕಾಚಾರ್ಯ ರಥೋತ್ಸವ ನಡೆಯಲಿದೆ. ಬಾಳೆಹೊನ್ನೂರು ಡಾ. ವೀರಸೋಮೇಶ್ವರ ಜಗದ್ಗುರು ಸಾನ್ನಿಧ್ಯದಲ್ಲಿರಲಿದ್ದಾರೆ. ಪ್ರಧಾನ ಅತಿಥಿಗಳು ಹಾಗೂ ಹಿರೇಮಠ, ಗ್ರಾಮೀಣ ಗಣ್ಯರು ಪಾಲ್ಗೊಳ್ಳುವರು. ಭಾಗವಹಿಸುವ ಭಕ್ತರಿಗೆ ಅನ್ನ ಪ್ರಸಾದ ವ್ಯವಸ್ಥೆ ಜರುಗಲಿದೆ.

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಹುಬ್ಬಳ್ಳಿ ತಾಲೂಕಿನ ತಿರುಮಲಕೊಪ್ಪ ಗ್ರಾಮದ ಶ್ರೀ ಜಗದ್ಗುರು ರೇಣುಕ ಧರ್ಮ ನಿವಾಸದಲ್ಲಿ ಮಾರ್ಚ್ 19 ರಂದು ಗುರುವಾರ, ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ ನಡೆಯಲಿದೆ. ಈ ಸಮಾರಂಭಕ್ಕೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರು ಅವರ ಸಾನ್ನಿಧ್ಯ ದೊರೆಯಲಿದೆ.

ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಮಾರಂಭ ಉದ್ಘಾಟನೆ ನಡೆಸಲಿದ್ದು, ಬಂಕಾಪುರದ ರೇವಣಸಿದ್ಧೇಶ್ವರ ಶಿವಾಚಾರ್ಯ, ಸುಳ್ಳದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ, ಸೂಡಿಯ ಕೊಟ್ಟೂರು ಬಸವೇಶ್ವರ ಶಿವಾಚಾರ್ಯ, ಮಳಲಿಮಠದ ಗ`ಂರ`ಂನಾಗ`ಭ`ೂಷ`ಣ ಶಿವಾಚಾರ್ಯ, ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯ ಮತ್ತು ಮಾಗಣಗೇರಾ ಏಕಾಕ್ಷರ ಶಿವಾಚಾರ್ಯ ಉಪದೇಶ ನೀಡುವರು.

ಮುಖ್ಯ ಅತಿಥಿಗಳಾಗಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಸಚಿವ ಸಂತೋಷ ಲಾಡ್, ಶಾಸಕ ಎಂ.ಆರ್. ಪಾಟೀಲ, ಮಾಜಿ ಸಂಸದ ಮಂಜುನಾಥ ಕುನ್ನೂರು, ಮಾಜಿ ಶಾಸಕ ಎಂ.ಎಸ್. ಅಕ್ಕಿ ಸೇರಿದಂತೆ ನೂಲ್ವಿಯ ಶಂಕರಗೌಡ್ರ ಸಿದ್ಧನಗೌಡ್ರ, ಅದರಗುಂಚಿ ಎಸ್. ಎಸ್. ಪಾಟೀಲ, ಅಜ್ಜಯ್ಯ ಗಡ್ಡದ್ದೇವರಮಠ, ಎಂ.ಜಿ. ಹಿರೇಮಠ, ವಿಶ್ವನಾಥ ಹಿರೇಗೌಡರ ಮತ್ತು ಸುತ್ತಮುತ್ತಲಿನ ಗ್ರಾಮಗಳ ಗಣ್ಯರು ಭಾಗವಹಿಸಲಿದ್ದಾರೆ.

ಮಾರ್ಚ್ 19 ರಂದು ಸಂಜೆ ರಥೋತ್ಸವ ಶ್ರೀ ರಂಭಾಪುರಿ ಜಗದ್ಗುರು ಸಾನ್ನಿಧ್ಯದಲ್ಲಿ ನಡೆಯಲಿದ್ದು, ಪ್ರಾತಃಕಾಲ ಶಿವದೀಕ್ಷೆ ಆಯ್ಯಾಚಾರ ನಡೆಯಲಿದೆ ಮತ್ತು ಮಂಗಳ ಮೂರ್ತಿಗೆ ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರು ಅವರ ರುದ್ರಾಭಿಷೇಕ ನಡೆಯಲಿದೆ. ಮಾರ್ಚ್ 20 ರಂದು ಸಂಜೆ ಪಾರ್ವತಿ ರಥೋತ್ಸವ ಮತ್ತು ಧರ್ಮ ಸಮಾರಂಭ ನಡೆಯಲಿದೆ. ತಿರುಮಲಕೊಪ್ಪದ ಶ್ರೀ ಬಸವೇಶ್ವರ ಯುವಕ ಮಂಡಳಿ ಹಾಗೂ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಪ್ರೌಢಶಾಲೆ ಶಿಕ್ಷಕ ವೃಂದ ಸಕ್ರಿಯವಾಗಿ ಪಾಲ್ಗೊಳ್ಳುತ್ತಾರೆ.

ಭಾಗವಹಿಸುವ ಭಕ್ತರಿಗೆ ಅನ್ನ ಪ್ರಸಾದದ ವ್ಯವಸ್ಥೆ ಮಾಡಲಾಗಿದೆ ಮತ್ತು ಹೆಚ್ಚಿನ ಭಕ್ತರು ಭಾಗವಹಿಸುವಂತೆ ಸಿ.ಎಚ್. ಬಾಳನಗೌಡ್ರ ವಿನಂತಿ ಮಾಡಿದ್ದಾರೆ.

# ಬಾಗಲಕೋಟೆ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಅಡಿಗಲ್ಲು

▶▶ಮೊದಲನೇ ಪುಟದಿಂದ

ಆರೋಪಕ್ಕೆ ಪ್ರತಿಕ್ರಿಯಿಸಿ, ಬಿಜೆಪಿ ನಾಲ್ಕು ವರ್ಷ ಅಧಿಕಾರದಲ್ಲಿದ್ದರೂ ವೈದ್ಯಕೀಯ ಕಾಲೇಜು ಏಕೆ ಸ್ಥಾಪಿಸಲಿಲ್ಲ ಎಂದು ಪ್ರಶ್ನಿಸಿದರು.

ಬಾಗಲಕೋಟೆ ಹಾಗೂ ದಾವಣಗೆರೆ ಉಪಚುನಾವಣೆಗೆ ಅಭ್ಯರ್ಥಿಗಳ ಆಯ್ಕೆಯನ್ನು ಹೈಕಮಾಂಡ್ ತೀರ್ಮಾನ ಮಾಡಲಿದೆ.

ಹೆಚ್.ವೈ. ಮೇಟಿ ಕುಟುಂಬದವರೂ ಆಕಾಂಕ್ಷಿಗಳಾಗಿದ್ದಾರೆ ಎಂದು ಹೇಳಿದರು. ಉಪಚುನಾವಣೆ ಒಂದು ವಾರದೊಳಗೆ ಘೋಷಣೆಯಾಗುವ ಸಾಧ್ಯತೆ ಇದೆ ಎಂದರು.

**ಸಿಲಿಂಡರ್ ಪೂರೈಕೆ:** ಎಲ್‌ಪಿಜಿ ಸಿಲಿಂಡರ್ ಪೂರೈಕೆ ಸುಗಮಗೊಳಿಸುವುದು ಕೇಂದ್ರ ಸರ್ಕಾರದ ಜವಾಬ್ದಾರಿ. ಈ ಕುರಿತು ಆಹಾರ ಸಚಿವರು ಈಗಾಗಲೇ ಸಭೆ ನಡೆಸಿದ್ದು, ಕೇಂದ್ರ ಸಚಿವರಿಗೆ ಪತ್ರ ಬರೆಯಲಾಗಿದೆ ಎಂದು ಹೇಳಿದರು.

ಒಳಮೀಸಲಾತಿ ಕುರಿತು ಮಾರ್ಚ್ 27 ರಂದು ಸಭೆ ಕರೆಯಲಾಗಿದ್ದು, ಅಂದು ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

# ಬೇಸಿಗೆಯ ಬವಣೆ ತಪ್ಪಿಸಲು ಮುಂದಾದ ನಗರಸಭೆ ಸದಸ್ಯ ಬರಕತಅಲಿ ಮುಲ್ಲಾ



**■ವಿಜಯಸಾಕ್ಷಿ ಸುದ್ದಿ, ಗದಗ**

ಬೇಸಿಗೆ ತಾಪಮಾನ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ನಗರ ನಿವಾಸಿಗಳ ನೀರಿನ ಸಮಸ್ಯೆ ನಿವಾರಣೆಗೆ ನಗರಸಭೆ ಸದಸ್ಯರು ಮುಂದಾಗಿದ್ದಾರೆ. ಈ ಬಾರಿ ಗದಗದಲ್ಲಿ ತಾಪಮಾನವು 38-39 ಡಿಗ್ರಿ ಸೆಲ್ಸಿಯಸ್ ತಲುಪುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರಿಗೆ ನೀರಿನ ಕೊರತೆ ಉಂಟಾಗುವ ಆತಂಕ ಹೆಚ್ಚಾಗಿದೆ.

ಇದನ್ನು ಮನಗಂಡು ಗದಗ ನಗರದ ವಾರ್ಡ್ ನಂ.23ರಲ್ಲಿ ನಗರಸಭೆ ಸದಸ್ಯ ಬರಕತಅಲಿ ಮುಲ್ಲಾ ಅವರು ಹನುಮನ ಗರಡಿಯ ಎದುರಿನ ಬಿಕ್ಕುನವರ ಸಂಧಿಯಲ್ಲಿ ಬೋರ್‌ವೆಲ್ ಕೊರೆಯಿಸಿ ಸ್ಥಳೀಯ ನಿವಾಸಿಗಳ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ತೀವ್ರ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆಯ ಕ್ರಮವಾಗಿ ಈ ಕಾರ್ಯ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಬೋರ್‌ವೆಲ್ ಕಾಮಗಾರಿ ಪೂರ್ಣಗೊಂಡ ಹಿನ್ನೆಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನಗರಸಭೆ ಮಾಜಿ ಸದಸ್ಯ ಎಂ.ಸಿ. ಶೇಖ್ ಸೇರಿದಂತೆ ವಾರ್ಡ್‌ನ ಹಿರಿಯರು ಮತ್ತು ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

**ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಶಿಕ್ಷಕ ಹಿರೇಮಠರಿಂದ 45 ಸಾವಿರ ನಗದು ಬಹುಮಾನ**

# ಮಕ್ಕಳ ಉತ್ತಮ ಭವಿಷ್ಯ ವರ್ಗಕೋಣೆಯಲ್ಲೇ ರೂಪುಗೊಳ್ಳುತ್ತದೆ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಶಿಕ್ಷಕರು ಬೋಧಿಸುವ ಪಾಠವನ್ನು ಆಸಕ್ತಿಯಿಂದ ಕೇಳಿ, ಶ್ರದ್ಧೆಯಿಂದ ಪುಸ್ತಕ ಓದಿ ಮನನ ಮಾಡಿಕೊಂಡು ಧೈರ್ಯದಿಂದ ಪರೀಕ್ಷೆ ಬರೆಯುವ ಮೂಲಕ ಉತ್ತಮ ಫಲಿತಾಂಶ ಸಾಧಿಸಬೇಕು ಎಂದು ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಕೆ.ಎಸ್. ಪೂಜಾರ ಹೇಳಿದರು.

ಲಕ್ಕುಂಡಿಯ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರೌಢಶಾಲಾ ಹಂತದ ಶಿಕ್ಷಣವು ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣಕ್ಕೆ ಅತ್ಯಂತ ಮಹತ್ವದ್ದಾಗಿದ್ದು, ಹೆಚ್ಚು ಕಾಳಜಿ ವಹಿಸಿ ಅಭ್ಯಾಸ ಮಾಡಬೇಕೆಂದು ಸಲಹೆ ನೀಡಿದರು.

ನಿವೃತ್ತ ಮುಖ್ಯ ಶಿಕ್ಷಕರಾದ ಸಿ.ಸಿ. ಕುರಹಟ್ಟಿ ಮಾತನಾಡಿ, ಹೆಣ್ಣುಮಕ್ಕಳ ಶಿಕ್ಷಣಕ್ಕೆ ಸರ್ಕಾರ ಹೆಚ್ಚಿನ ಮಹತ್ವ ನೀಡಿದ್ದು, ಮೊಬೈಲ್ ಮತ್ತು ಟಿ.ವಿ.ಗಳಿಂದ ದೂರವಿದ್ದು ಹೆಚ್ಚಿನ ಅಂಕಗಳೊಂದಿಗೆ ಶಾಲೆ ಹಾಗೂ ಗ್ರಾಮಕ್ಕೆ ಕೀರ್ತಿ ತರಬೇಕು ಎಂದು ಹೇಳಿದರು.


ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ವೈ.ಎಚ್. ತಕ್ಕಲಕೋಟಿ ಮಾತನಾಡಿ, ವಿದ್ಯಾರ್ಥಿಗಳು ಪ್ರತಿದಿನ ಶಿಕ್ಷಕರು ನೀಡುವ ಕಾರ್ಯವನ್ನು ಅಚ್ಚುಕಟ್ಟಾಗಿ ಪಾಲಿಸಿಕೊಂಡು ಶ್ರದ್ಧೆಯಿಂದ ಅಭ್ಯಾಸ ಮಾಡಬೇಕು. ಮಕ್ಕಳ ಪ್ರತಿಭೆಗೆ ಸಮಾಜದ ಪ್ರೋತ್ಸಾಹದ ಜೊತೆಗೆ ಸರ್ಕಾರದಿಂದ ಹಲವು ಸೌಲಭ್ಯಗಳೂ ಲಭ್ಯವಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಕೂಡ ನಡೆಯಿತು.

ಎಸ್‌ಡಿಎಂಸಿ ಅಧ್ಯಕ್ಷ ಆರ್. ಎಚ್. ತಹಶೀಲ್ದಾರ್, ಸದಸ್ಯರಾದ ಅಶೋಕ ಗದಗಿನ, ವಿಜಯಲಕ್ಷ್ಮೀ ಬಡಿಗೇರ, ಈರಪ್ಪ ಬಳೂಟಗಿ, ಕಲ್ಲಪ್ಪ ಬಣವಿ, ಗ್ರಾಮ ಪಂಚಾಯತ್ ಮಾಜಿ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ, ಮಹಾಂತೇಶ ಕುಂಬಾರ ಹಾಗೂ ಕರಿಯಪ್ಪ ರವಳೋಜಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶಿಕ್ಷಕ ಹಿರೇಮಠರಿಂದ 45 ಸಾವಿರ ನಗದು ಬಹುಮಾನ

ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ಸಹ ಶಿಕ್ಷಕರಾದ ಜೆ.ವಿ. ಹಿರೇಮಠ ಅವರು ತಮ್ಮ ತಂದೆಯವರ ಸ್ಮರಣಾರ್ಥವಾಗಿ ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.96.16 ಅಂಕ ಪಡೆದ ವಿದ್ಯಾರ್ಥಿನಿ ಗಾಯತ್ರಿ ಹಳ್ಳಿಗೆ 10 ಸಾವಿರ ನಗದು ಬಹುಮಾನ ನೀಡಿದರು. ಅಲ್ಲದೆ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ಏಳು ವಿದ್ಯಾರ್ಥಿಗಳಿಗೆ ತಲಾ 5 ಸಾವಿರ ನಗದು ಬಹುಮಾನ ಹಾಗೂ ಪುರಸ್ಕಾರ ನೀಡಿ ಗೌರವಿಸಿದರು.

# ಕಾರ್ಯಕ್ರಮವನ್ನು ಶಿಸ್ತುಬದ್ಧವಾಗಿ ಸಂಘಟಿಸಲು ಡಿಸಿ ಸೂಚನೆ




**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಮಹಾನಗರದ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾ ಸಂಕೀರ್ಣ ಹಾಗೂ ಈಜುಕೊಳದ ಲೋಕಾರ್ಪಣೆ ಕಾರ್ಯಕ್ರಮ ಹಾಗೂ ಧಾರವಾಡ ಸಂಸದ ಕ್ರೀಡಾ ಮಹೋತ್ಸವದ ಸಮಾರೋಪ ಸಮಾರಂಭವು ಮಾರ್ಚ್ 14 ರಂದು ಜರುಗಲಿದ್ದು, ಕಾರ್ಯಕ್ರಮದ ಯಶಸ್ವಿಗೊಳಿಸಲು ಈಗಾಗಲೇ ವಿವಿಧ ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿಗಳನ್ನು ರಚಿಸಲಾಗಿದ್ದು. ಹೀಗಾಗಿ ಎಲ್ಲ ಸಮಿತಿ ಸದಸ್ಯರು ತಮ್ಮ ಕರ್ತವ್ಯಗಳನ್ನು ನಿರ್ವಹಿಸುವ ಮೂಲಕ ಸಮಾರಂಭಗಳನ್ನು ಯಶಸ್ವಿಯಾಗಿ ಸಂಘಟಿಸಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಮಾರ್ಚ್ 14 ರ ಕಾರ್ಯಕ್ರಮಗಳ ಸಿದ್ಧತೆಗಳ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೆಂಗಳೂರಿನ ರೈಲ್ವೆ ವಿಕಾಸ್ ನಿಗಮ ಲಿ., ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ನೂತನ ಕ್ರೀಡಾ ಸಂಕೀರ್ಣ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಈಜುಕೊಳದ ಲೋಕಾರ್ಪಣೆ ಕಾರ್ಯಕ್ರಮವನ್ನು ಮಾರ್ಚ್ 14 ರ ಮಧ್ಯಾಹ್ನ 3:30 ಗಂಟೆಗೆ ಧಾರವಾಡ ಕೋರ್ಟ್ ಸರ್ಕಲ್‌ನಲ್ಲಿರುವ ಪಾಲಿಕೆಯ ಈಜುಕೊಳ ಆವರಣದ ಕ್ರೀಡಾ ಸಂಕೀರ್ಣದಲ್ಲಿ ಆಯೋಜಿಸಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರದ ಯುವಜನ ವ್ಯವಹಾರ ಮತ್ತು ಕ್ರೀಡಾ ಹಾಗೂ ಕಾರ್ಮಿಕ ಮತ್ತು ಉದ್ಯೋಗ ಕೇಂದ್ರ ಸಚಿವ ಡಾ. ಮನ್ಸುಖ್ ಮಾಂಡವೀಯ ಅವರು ಹಾಗೂ ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಲ್ಹಾದ ಜೋಶಿ ಅವರು ಸೇರಿದಂತೆ ಸ್ಥಳೀಯ ಹಾಗೂ ಜಿಲ್ಲೆಯ ಶಾಸಕರು, ವಿವಿಧ ಜನಪ್ರತಿನಿಧಿಗಳು, ಕ್ರೀಡಾಪಟುಗಳು ಮತ್ತು ಸಾರ್ವಜನಿಕರು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಅಂದು (ಮಾ.14) ಸಂಜೆ 5:30 ಗಂಟೆಗೆ ಕರ್ನಾಟಕ ವಿಜ್ಞಾನ ಕಾಲೇಜು ಮೈದಾನದಲ್ಲಿ ಧಾರವಾಡ ಸಂಸದ ಕ್ರೀಡಾ ಮಹೋತ್ಸವದ ಸಮಾರೋಪ ಸಮಾರಂಭವು ಜರುಗಲಿದೆ. ಈ ಕಾರ್ಯಕ್ರಮದಲ್ಲಿಯೂ ಕೇಂದ್ರ ಸರ್ಕಾರದ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ಮತ್ತು ಪ್ರಲ್ಹಾದ ಜೋಶಿ ಅವರು ಭಾಗವಹಿಸಲಿದ್ದಾರೆ.

ಪ್ರತಿ ಕಾರ್ಯಕ್ರಮದಲ್ಲಿ ಪ್ರೇಕ್ಷರಿಗೆ ಹಾಗೂ ಆಗಮಿಸುವ ಗಣ್ಯರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ವ್ಯವಸ್ಥೆ ಮಾಡಬೇಕು. ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಬೇಕು. ಕಂದಾಯ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದ ಸಂಘಟನೆಯಲ್ಲಿ ಯಾವುದೇ ಲೋಪವಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಅವರು ಹೇಳಿದರು. ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳು ಸಕ್ರಿಯವಾಗಿ ಭಾಗವಹಿಸಿ, ಕೆಸಿಡಿ ಮೈದಾನದಲ್ಲಿ ನಡೆಯುವ ಕ್ರೀಡಾಕೂಟದಲ್ಲಿಯೂ ಯಾವುದೇ ಲೋಪದೋಷಗಳು ಆಗದಂತೆ ಅಚ್ಚುಕಟ್ಟಾದ ವ್ಯವಸ್ಥೆಯನ್ನು ನಿರ್ವಹಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಎಸಿಪಿ ಪ್ರಶಾಂತ್ ಸಿದ್ದನಗೌಡರ, ತಹಶೀಲ್ದಾರ್ ಡಾ. ಡಿ.ಎಚ್. ಹೂಗಾರ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಮಾ. 18ರಿಂದ ಎಪ್ರಿಲ್ 02ರವರೆಗೆ ಪರೀಕ್ಷೆ; ತಾಲೂಕಿನ 6 ಕೇಂದ್ರಗಳಲ್ಲಿ ಎಲ್ಲಾ ಸಿದ್ಧತೆ - ತಹಸೀಲ್ದಾರ ಧನಂಜಯ ಎಂ.**

# ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಕಲು ಮುಕ್ತವಾಗಿ ನಡೆಸಲು ಕ್ರಮ



> "ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ನಕಲು ಮುಕ್ತ ಮತ್ತು ಶಾಂತಿಯುತ ವಾತಾವರಣದಲ್ಲಿ ನಡೆಸಲು ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು."
>
> - **ಧನಂಜಯ ಎಂ.**, ತಹಸೀಲ್ದಾರ.

**ಲಕ್ಷ್ಮೇಶ್ವರ ತಾಲ್ಲೂಕಿನ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳು**

1) ಪುರಸಭೆ ಉಮಾ ವಿದ್ಯಾಲಯ, ಲಕ್ಷ್ಮೇಶ್ವರ
2) ಪಿಎಸ್‌ಬಿಡಿ ಬಾಲಕಿಯರ ಪ್ರೌಢ ಶಾಲೆ
3) ಬಿಸಿಎನ್ ಕನ್ನಡ ಮಾಧ್ಯಮ ಪ್ರೌಢ ಶಾಲೆ
4) ಸರ್ಕಾರಿ ಪ್ರೌಢ ಶಾಲೆ, ಪುಟಗಾಂವ್ ಬಡ್ನಿ
5) ಎಸ್‌ಎಸ್‌ಕೆ ಪ್ರೌಢ ಶಾಲೆ, ಶಿಗ್ಲಿ
6) ಸರ್ಕಾರಿ ಪ್ರೌಢ ಶಾಲೆ, ಬಾಲೆಹೊಸೂರು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಾರ್ಚ್ 18ರಿಂದ ಎಪ್ರಿಲ್ 02ರವರೆಗೆ ನಡೆಯುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಯಾವುದೇ ಲೋಪಗಳಿಲ್ಲದೆ ನಕಲು ಮುಕ್ತ ಹಾಗೂ ಸ್ನೇಹಮಯ ವಾತಾವರಣದಲ್ಲಿ ನಡೆಸಲು ಎಲ್ಲ ಅಧಿಕಾರಿಗಳು ಜಾಗ್ರತೆ ವಹಿಸಬೇಕು ಎಂದು ತಹಸೀಲ್ದಾರ ಧನಂಜಯ ಎಂ. ಹೇಳಿದರು.

ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಶುಕ್ರವಾರ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕಿನಲ್ಲಿ ಯಾವುದೇ ಅಡೆತಡೆ ಇಲ್ಲದೆ ಪರೀಕ್ಷೆ ಸುಸೂತ್ರವಾಗಿ ನಡೆಯುವ ಉದ್ದೇಶದಿಂದ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕೆಲಸ ಮಾಡಬೇಕು ಎಂದು ಸೂಚಿಸಿದರು. ಪರೀಕ್ಷಾ ಕೇಂದ್ರಗಳ ಹತ್ತಿರ ಬಸ್ ನಿಲುಗಡೆ ವ್ಯವಸ್ಥೆ ಮಾಡುವುದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಬಸ್ ಸೌಲಭ್ಯ ಕಲ್ಪಿಸುವುದು ಸೇರಿದಂತೆ ವಿವಿಧ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾ ವ್ಯವಸ್ಥೆ ಕಡ್ಡಾಯವಾಗಿದ್ದು, ಮುಖ್ಯ ಅಧೀಕ್ಷಕರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ವಿದ್ಯಾರ್ಥಿಗಳು ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರವೇಶ ಪತ್ರ ತೋರಿಸಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಪ್ರೌಢ ವಿಭಾಗ ಶಿಕ್ಷಣ ಸಂಯೋಜಕ ಆರ್.ಬಿ. ಜೋಶಿ ಮಾತನಾಡಿ, ಲಕ್ಷ್ಮೇಶ್ವರ ತಾಲೂಕಿನಲ್ಲಿ ಒಟ್ಟು 6 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು,

ಎಲ್ಲಾ ಕೇಂದ್ರಗಳಲ್ಲಿ ಕುಡಿಯುವ ನೀರು, ಗಾಳಿ, ಬೆಳಕು ಮತ್ತು ವಿದ್ಯುತ್ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದರು.

ಸಭೆಯಲ್ಲಿ ಸಾರಿಗೆ ಘಟಕ ವ್ಯವಸ್ಥಾಪಕಿ ಸವಿತಾ ಆದಿ, ಎಎಸ್‌ಐ ವಿ.ಸಿ. ದೊಡ್ಡಮನಿ, ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಆರೋಗ್ಯ ಇಲಾಖೆಯ ಕೃಷ್ಣಕುಮಾರ ಕುಲಕರ್ಣಿ ಹಾಗೂ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು ಉಪಸ್ಥಿತರಿದ್ದರು.

## “ಡಾ. ದತ್ತಾತ್ರೇಯ ವೈಕುಂಠೆ ಬರೆದ 'ಪೌಷ್ಟಿಕ ಆಹಾರ' ಕಿರುಪುಸ್ತಿಕೆ ಬಿಡುಗಡೆ”




■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಅಕಾಡೆಮಿ ಧಾರವಾಡ ಹಾಗೂ ಆಕಾಶವಾಣಿ ಧಾರವಾಡ ಸಹಯೋಗದಲ್ಲಿ ಪ್ರಸಾರಗೊಂಡ 'ಅರಳಲಿ ಬೆಳಕಿನ ನಾಳೆ' ಸರಣಿಯ ವಿಜೇತ ಕೇಳುಗರ ಬಹುಮಾನ ವಿತರಣಾ ಸಮಾರಂಭ ಹಾಗೂ ರಜತ ಮಹೋತ್ಸವದ ಗೌರವ ಕಾರ್ಯಕ್ರಮ ಇತ್ತೀಚೆಗೆ ಧಾರವಾಡ ಆಕಾಶವಾಣಿ ಕೇಂದ್ರದ ಶಾಲ್ಮಲಾ ಸಭಾಭವನದಲ್ಲಿ ನಡೆಯಿತು.

ಈ ಸಂದರ್ಭದಲ್ಲಿ ಗದುಗಿನ ರಕ್ತದಾನಿ ಹಾಗೂ ರಕ್ತಪಾಸಿಗ ಡಾ. ದತ್ತಾತ್ರೇಯ ವೈಕುಂಠೆ ಅವರ ಹೊಸ ಕಿರುಪುಸ್ತಿಕೆ 'ಪೌಷ್ಟಿಕ ಆಹಾರ'– ಮಕ್ಕಳಲ್ಲಿ ಆಹಾರದ ಬಗ್ಗೆ ಜಾಗೃತಿ ಮೂಡಿಸುವುದಕ್ಕೆ ಬರೆದ ಕೃತಿ, ರಜತ ಪುಷ್ಪ–11 ಅವತಾರದಲ್ಲಿ ಬಿಡುಗಡೆ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಐಐಟಿ ಡೀನ್, ವಿಜ್ಞಾನಿ ಡಾ. ಎಸ್. ಎನ್. ಶಿವಸ್ವಾಮಿ ಉಪಸ್ಥಿತರಿದ್ದರು. ಜೊತೆಗೆ ಆಕಾಶವಾಣಿ ಡೆಪ್ಯೂಟಿ ಡೈರೆಕ್ಟರ್ ಜನರಲ್ (ಇ) ಕೆ.ಅರುಣ ಪ್ರಭಾಕರ ಮತ್ತು ಆಕಾಶವಾಣಿ ಸಹಾಯಕ ನಿಲಯ ನಿರ್ದೇಶಕ ಶರಣಬಸವ ಚೋಳಿ ಕಾರ್ಯಕ್ರಮದಲ್ಲಿ ಹಾಜರಿದ್ದರು.

ಕಾರ್ಯಕ್ರಮದಲ್ಲಿ ಸಿ.ಯು. ಬೆಳ್ಳಕ್ಕಿ, ಸತೀಶ್ ಪರ್ವತಿಕರ, ಶ್ರೀಮತಿ ಮಂಜುಳಾ ಪುರಾಣಿಕ, ಶ್ರೀಕಾಂತ ದೊಡ್ಡವಾಡ, ಡಾ. ಬಾಳಣ್ಣ ಚಿನಗುಡಿ, ಅರವಿಂದ ದೇಶಮುಖ ಸೇರಿದಂತೆ ಹಲವಾರು ಉಪಸ್ಥಿತರಿದ್ದರು.

### ಯುಕೆಪಿ ಹಂತ–3ಕ್ಕೆ 3 ಸಾವಿರ ಕೋಟಿ ಮೀಸಲು – ಸಿಎಂ ಸಿದ್ದರಾಮಯ್ಯ

# ಗ್ಯಾರಂಟಿ–ಅಭಿವೃದ್ಧಿಗೆ ಸಮಾನ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ

ಉತ್ತರ ಕರ್ನಾಟಕದ ಪ್ರಾದೇಶಿಕ ಅಸಮಾನತೆಯನ್ನು ನಿವಾರಿಸಲು ರಾಜ್ಯ ಸರ್ಕಾರ ಬದ್ಧವಾಗಿದ್ದು, ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುವ ಜನರ ಸರ್ಕಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬಾಗಲಕೋಟೆ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆಯ ಶಂಕುಸ್ಥಾಪನೆ, ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಕೃಷ್ಣ ಮೇಲ್ದಂಡೆ ಯೋಜನೆ (ಯುಕೆಪಿ) ಹಂತ–3ರ ಭೂಸ್ವಾಧೀನ ಜಮೀನುಗಳಿಗೆ ಒಪ್ಪಂದದ ದರದಂತೆ ಪರಿಹಾರ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಭಾಗದ ಮಾಜಿ ಶಾಸಕ ದಿವಂಗತ ಹೆಚ್.ವೈ. ಮೇಟಿ ಅವರ ಪ್ರಯತ್ನದಿಂದಲೇ ಬಾಗಲಕೋಟೆ ಮೆಡಿಕಲ್ ಕಾಲೇಜಿನ ಕನಸು ನನಸಾಗುತ್ತಿದೆ ಎಂದು ಸ್ಮರಿಸಿದರು. 2025ರ ಬಜೆಟ್‌ನಲ್ಲಿ ಘೋಷಣೆಯಾದ ಮೆಡಿಕಲ್ ಕಾಲೇಜಿನ ಶಂಕುಸ್ಥಾಪನೆ ಈಗ ನಡೆಯುತ್ತಿದೆ. ಇದು ಉಪಚುನಾವಣೆಯ ಕಾರಣಕ್ಕಾಗಿ ಅಲ್ಲ ಎಂದು ಸ್ಪಷ್ಟಪಡಿಸಿದರು.

ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಹಾಗೂ ಟ್ರಾಮಾ ಸೆಂಟರ್ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದ್ದು, ಈಗಾಗಲೇ ಸುಮಾರು 25 ಜಿಲ್ಲೆಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ. ಮುಂದಿನ ವರ್ಷ ಇಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

**ಗ್ಯಾರಂಟಿ ಹಾಗೂ ಅಭಿವೃದ್ಧಿಗೆ ಸಮಾನ ಆದ್ಯತೆ :** ಗ್ಯಾರಂಟಿ ಯೋಜನೆಗಳಿಂದಾಗಿ ಸರ್ಕಾರದಲ್ಲಿ ಅಭಿವೃದ್ಧಿಗೆ ಹಣವಿಲ್ಲ ಎಂದು ಬಿಜೆಪಿಯವರು ಮಾಡುತ್ತಿರುವ ಆರೋಪ ಸತ್ಯಕ್ಕೆ ದೂರವಾಗಿದೆ. ಪ್ರತಿವರ್ಷ ಗ್ಯಾರಂಟಿ ಯೋಜನೆಗಳಿಗೆ ಸುಮಾರು 50 ಸಾವಿರ ಕೋಟಿ ವೆಚ್ಚವಾಗುತ್ತಿದ್ದು, ಇದುವರೆಗೆ 1.22 ಲಕ್ಷ ಕೋಟಿ ವೆಚ್ಚ ಮಾಡಲಾಗಿದೆ ಎಂದು ಹೇಳಿದರು. ಬಿಜೆಪಿ ನಾಲ್ಕು ವರ್ಷ ಅಧಿಕಾರದಲ್ಲಿದ್ದರೂ ಬಾಗಲಕೋಟೆಯಲ್ಲಿ ಮೆಡಿಕಲ್ ಕಾಲೇಜು ಸ್ಥಾಪಿಸಲಿಲ್ಲ ಎಂದು ಟೀಕಿಸಿದರು.

**ಯುಕೆಪಿ ಹಂತ–3 ಭೂಪರಿಹಾರ ಒಂದೇ ಬಾರಿಗೆ ಪಾವತಿ:** ಯುಕೆಪಿ ಯೋಜನೆಗೆ ಭೂಮಿ ನೀಡುವ ರೈತರಿಗೆ ಪರಿಹಾರವನ್ನು ಒಂದೇ ಬಾರಿಗೆ ನೀಡಲು ಸರ್ಕಾರ ನಿರ್ಧರಿಸಿದೆ. ಈ ಬಾರಿಯ ಬಜೆಟ್‌ನಲ್ಲಿ ಯುಕೆಪಿ ಹಂತ–3ರ ಭೂಪರಿಹಾರಕ್ಕಾಗಿ 3 ಸಾವಿರ ಕೋಟಿ ಮೀಸಲಿಡಲಾಗಿದೆ. ನೀರಾವರಿ ಜಮೀನಿಗೆ 40 ಲಕ್ಷ ಹಾಗೂ ಖುಷ್ಕಿ ಜಮೀನಿಗೆ 30 ಲಕ್ಷ ನೀಡಲಾಗುವುದು ಎಂದು ಹೇಳಿದರು.

**ನೀರಾವರಿ ಯೋಜನೆಗಳಿಗೆ ಕೇಂದ್ರದ ಅನುಮತಿ ಬಾಕಿ:** ಯುಕೆಪಿ ಯೋಜನೆಯ ವ್ಯಾಪ್ತಿಗೆ ಬರುವ 8 ಗ್ರಾಮಗಳ 900 ಎಕರೆ ಜಮೀನಿಗೆ 446 ಕೋಟಿ ಪರಿಹಾರ ನೀಡಲಾಗುತ್ತಿದೆ. ಯುಕೆಪಿ, ಮಹಾದಾಯಿ ಸೇರಿದಂತೆ ಹಲವು ನೀರಾವರಿ ಯೋಜನೆಗಳಿಗೆ ಅಗತ್ಯ ಅನುಮತಿಯನ್ನು ಕೇಂದ್ರ ಸರ್ಕಾರ ಇನ್ನೂ ನೀಡಿಲ್ಲ ಎಂದು ಅವರು ಹೇಳಿದರು.



“ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಗೂ ಸಮಾನ ಆದ್ಯತೆ ನೀಡುತ್ತಿದ್ದೇವೆ. ಉತ್ತರ ಕರ್ನಾಟಕದ ಪ್ರಾದೇಶಿಕ ಅಸಮಾನತೆಯನ್ನು ನಿವಾರಿಸಲು ನಮ್ಮ ಸರ್ಕಾರ ಬದ್ಧವಾಗಿದೆ.”

– ಸಿದ್ದರಾಮಯ್ಯ, ಮುಖ್ಯಮಂತ್ರಿ

1) ಯುಕೆಪಿ ಹಂತ–3 ಭೂಪರಿಹಾರಕ್ಕೆ 3 ಸಾವಿರ ಕೋಟಿ
2) ಯುಕೆಪಿ ಹಂತ–3 ಯೋಜನೆಗೆ ಭೂಸ್ವಾಧೀನಕ್ಕಾಗಿ ಸರ್ಕಾರ 3 ಸಾವಿರ ಕೋಟಿ ಮೀಸಲು
3) ನೀರಾವರಿ ಜಮೀನಿಗೆ 40 ಲಕ್ಷ ಪರಿಹಾರ
4) ಖುಷ್ಕಿ ಜಮೀನಿಗೆ 30 ಲಕ್ಷ ಪರಿಹಾರ
5) 8 ಗ್ರಾಮಗಳ 900 ಎಕರೆಗೆ 446 ಕೋಟಿ ಪರಿಹಾರ ವಿತರಣೆ.

### ಯುದ್ಧದ ಪರಿಣಾಮದಿಂದ ಸರಬರಾಜು ವ್ಯತ್ಯಯ – ಕಾಳಸಂತೆ ವ್ಯಾಪಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

## ಅಡುಗೆ ಅನಿಲ ಕೊರತೆ ವಿರುದ್ಧ ಸಿಪಿಐ(ಎಮ್) ಪ್ರತಿಭಟನೆ




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಅಡುಗೆ ಅನಿಲದ ಕೊರತೆಯಿಂದ ಜನರು ಸಂಕಷ್ಟ ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ ಸಿಪಿಐ(ಎಮ್) ಪಕ್ಷದ ವತಿಯಿಂದ ಶನಿವಾರ ಹಗರಿಬೊಮ್ಮನಹಳ್ಳಿ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಅಮೇರಿಕಾ–ಇಸ್ರೇಲ್, ಇರಾನ್ ಮೇಲೆ ನಡೆಸುತ್ತಿರುವ ಯುದ್ಧದ ಪರಿಣಾಮವಾಗಿ ಉಂಟಾದ ಅಂತಾರಾಷ್ಟ್ರೀಯ ಅಸ್ಥಿರತೆ ಹಾಗೂ ಪೆಟ್ರೋಲಿಯಂ ಸರಬರಾಜಿನಲ್ಲಿ ಉಂಟಾದ ವ್ಯತ್ಯಯಗಳಿಂದ ದೇಶದಲ್ಲಿ ಅಡುಗೆ ಅನಿಲದ ಕೊರತೆ ಉಂಟಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಜನರ ಹಿತಾಸಕ್ತಿಯನ್ನು ರಕ್ಷಿಸಲು ಅಗತ್ಯ ಅನಿಲ ಸಂಗ್ರಹಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಅವರು ಹೇಳಿದರು.

ಯುದ್ಧದ ಪರಿಣಾಮದಿಂದ ಇಂಧನ ಸರಬರಾಜು ವ್ಯವಸ್ಥೆ ಅಸ್ತವ್ಯಸ್ತಗೊಂಡಿದ್ದು, ಸಾಮಾನ್ಯ ಜನರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಅಡುಗೆ ಅನಿಲದ ಕೊರತೆಯಿಂದ ಅನೇಕ ವಿದ್ಯಾರ್ಥಿ ವಸತಿ ನಿಲಯಗಳು ತಮ್ಮ ಊಟದ ಮೆನುಗಳನ್ನು ಕಡಿಮೆ ಮಾಡಿರುವ ಪರಿಸ್ಥಿತಿ ನಿರ್ಮಾಣವಾಗಿದೆ.


ಇದರಿಂದ ಬಡ ವರ್ಗಗಳು ಹಸಿವಿನ ಅಂಚಿಗೆ ತಳ್ಳಲ್ಪಡುತ್ತಿದ್ದು, ಮಧ್ಯಮ ವರ್ಗವು ಹೆಚ್ಚುವರಿ ದುಬಾರಿಯಿಂದ ಸಂಕಷ್ಟ ಅನುಭವಿಸುತ್ತಿದೆ ಎಂದು ಆರೋಪಿಸಿದರು.

ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ತಕ್ಷಣ ಮಧ್ಯಪ್ರವೇಶ ಮಾಡಿ ಅನಿಲ ಸಿಲಿಂಡರ್‌ಗಳನ್ನು ಸಂಗ್ರಹಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಕರಾಳ ವ್ಯಾಪಾರಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ವಿದ್ಯಾರ್ಥಿ ವಸತಿ ನಿಲಯಗಳಿಗೆ ಅನಿಲ ಸಿಲಿಂಡರ್‌ಗಳ ನಿರಂತರ ಸರಬರಾಜು ಖಚಿತಪಡಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಿಪಿಎಂ ಪಕ್ಷದ ತಾಲೂಕು ಕಾರ್ಯದರ್ಶಿ ಬಿ. ಮಾಳಮ್ಮ, ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯ ಆರ್.ಎಸ್. ಬಸವರಾಜ್, ಜಿಲ್ಲಾ ಸಮಿತಿ ಸದಸ್ಯ ಎಸ್. ಜಗನ್ನಾಥ್, ತಾಲೂಕು ಸಮಿತಿ ಸದಸ್ಯ ಬಿ. ಚಾಂದ್ ಬಿ., ರಮೇಶ್, ಅಂಜನಮ್ಮ, ರತ್ನಮ್ಮ, ಜಿ. ರಮೇಶ್, ರಾಮಣ್ಣ ಸೇರಿದಂತೆ ಹಲವರು ಭಾಗವಹಿಸಿದ್ದರು.

ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ವಿದೇಶಾಂಗ ನೀತಿಯನ್ನು ಮರುಪರಿಶೀಲಿಸಿ, ಇರಾನ್ ಮೇಲೆ ಅಮೇರಿಕಾ–ಇಸ್ರೇಲ್ ನಡೆಸುತ್ತಿರುವ ಯುದ್ಧವನ್ನು ಖಂಡಿಸಬೇಕು. ಯುದ್ಧವನ್ನು ತಕ್ಷಣ ನಿಲ್ಲಿಸಲು ಭಾರತ ಸರ್ಕಾರ ಕರೆ ನೀಡಬೇಕು ಹಾಗೂ ಇಂಧನ ಸಂಪನ್ಮೂಲಗಳ ನಿರಂತರ ಸರಬರಾಜಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

# ಸಹಕಾರ ಕ್ಷೇತ್ರದಲ್ಲಿ ಸ್ವಾರ್ಥ ಬಿಟ್ಟರೆ ಸಂಘಗಳು ಯಶಸ್ವಿಯಾಗಲು ಸಾಧ್ಯ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂಘ ಶಕ್ತಿ ಕಲಿಯುಗೆ, ಯಾವುದೇ ಒಂದು ಸಂಘ ಬೆಳೆಯಬೇಕಾದರೆ ಎಲ್ಲರ ಸಹಕಾರ ಅಗತ್ಯ, ಸಹಕಾರ ಕ್ಷೇತ್ರದಲ್ಲಿ ಸ್ವಾರ್ಥ ಬಿಟ್ಟರೆ ಅಂತಹ ಸಹಕಾರ ಸಂಘಗಳು ಯಶಸ್ವಿಯಾಗಲು ಸಾಧ್ಯವಾಗುತ್ತವೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಪಂಚಮಸಾಲಿ ಕೋ–ಆಪ್ ಕ್ರೆಡಿಟ್ ಸೊಸೈಟಿ ನೂತನ ಕಟ್ಟಡ ಹಾಗೂ ಕಾರ್ಯಾಲಯ ಉದ್ಘಾಟನಾ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಸಹಕಾರಿ ಸಂಘಗಳಲ್ಲಿ ಸಾಲ ಪಡೆದುಕೊಳ್ಳುವುದರ ಜೊತೆಗೆ ಅದನ್ನು ಸರಿಯಾಗಿ ಮರುಪಾವತಿ ಮಾಡಿದಲ್ಲಿ ಸಹಕಾರಿ ಸಂಘಗಳು ಸುಭದ್ರ ಸ್ಥಿತಿಯಲ್ಲಿ ನಡೆಯುತ್ತವೆ. ಕಳೆದ 12 ವರ್ಷಗಳ ಹಿಂದೆ ಪ್ರಾರಂಭವಾದ ಸೊಸೈಟಿ ಇಂದು ಲಾಭದತ್ತ ಸಾಗುತ್ತಿರುವುದು ಉತ್ತಮ ಬೆಳವಣಿಗೆಯಾಗಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಇದರಲ್ಲಿ ಸದಸ್ಯರಾಗಿ ಉತ್ತಮ ಸಂಘ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಲಿ ಎಂದು ಹಾರೈಸಿದರು.

ಮಾಜಿ ಶಾಸಕರುಗಳಾದ ಜಿ.ಎಂ.ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ ಮಾತನಾಡಿ, ಗ್ರಾಮೀಣ ಮತ್ತು ನಗರ ಪ್ರದೇಶದ ಜನರಿಗೆ ಸುಲಭ ಸಾಲ ಸೌಲಭ್ಯ, ಉಳಿತಾಯ ಯೋಜನೆಗಳು ಮತ್ತು ಆರ್ಥಿಕ ಸಹಾಯವನ್ನು ಒದಗಿಸುವಲ್ಲಿ ಸಹಕಾರ ಸಂಘಗಳು ಪ್ರಮುಖ ಪಾತ್ರವನ್ನು ವಹಿಸುತ್ತಿವೆ. ಸಹಕಾರ ಸಂಘವನ್ನು ಸ್ಥಾಪಿಸುವವರು ಎಲ್ಲ ಸಮಾಜಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವುದು ಅವಶ್ಯ ಎಂದು ತಿಳಿಸಿದರು.

ಗದಗ ಜಿಲ್ಲೆಯಲ್ಲಿ ಅಡರಕಟ್ಟಿ ಸಹಕಾರ ಸಂಘ ಪ್ರಥಮಸ್ಥಾನದಲ್ಲಿರುವದು ಈ ಭಾಗಕ್ಕೆ ಹೆಮ್ಮೆಯ ವಿಷಯವಾಗಿದೆ. ಆಡಳಿತ ಮಂಡಳಿಯವರು ದಕ್ಷತೆಯಿಂದ ಪ್ರಾಮಾಣಿಕತೆಯಿಂದ ಕಾರ್ಯ ಮಾಡಿದಲ್ಲಿ ಉತ್ತಮ ಹೆಸರು, ಸಾಧನೆ ಮಾಡಲು ಸಾಧ್ಯವಾಗುತ್ತದೆ. ಪಂಚಮಸಾಲಿ ಸಮಾಜಕ್ಕೆ ತನ್ನದೆ ಆದ ಶ್ರೇಷ್ಠತೆ ಇದೆ. ಈ ಸಮಾಜದ ಅನೇಕ ಮಹನೀಯರು ನಾಡಿಗೆ ನೀಡಿದ ಕೊಡುಗೆ ಅಪಾರವಾಗಿದ್ದು, ಅದರಲ್ಲಿ ಬೆಳವಡಿ ಮಲ್ಲಮ್ಮ ಇದೇ ಲಕ್ಷ್ಮೇಶ್ವರದಲ್ಲಿ ಆರು ವರ್ಷಗಳ ಕಾಲ ಆಡಳಿತ ಮಾಡಿರುವುದು ಇತಿಹಾಸದಲ್ಲಿ ದಾಖಲಾಗಿದೆ. ಸಮಾಜಕ್ಕೆ ಪಂಚಮಸಾಲಿಯವರ ಕೊಡುಗೆಯನ್ನು ಮರೆಯುವಂತಿಲ್ಲ ಎಂದರು.

ಸಭೆಯ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಎಸ್.ಪಿ.ಪಾಟೀಲ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸಂಘದ ಉಪಾಧ್ಯಕ್ಷೆ ಚಂಪಾವತಿ ಚಿಂಚಲಿ, ನಿರ್ದೇಶಕರುಗಳಾದ ವಿಜಯ ಲಕ್ಷ್ಮೇಶ್ವರ, ಸುಲೋಚನಾ ಜವಾಯಿ, ಫಕ್ಕೀರಪ್ಪ ಅಣ್ಣಿಗೇರಿ, ಕುಬೇರಪ್ಪ ಮಹಾಂತಶೆಟ್ಟರ, ನೀಲಪ್ಪ ಕರ್ಜೇಕಣ್ಣವರ, ಸುರೇಶ ರಾಚನಾಯ್ಕರ, ಗಂಗನಗೌಡ ಪಾಟೀಲ, ಮಲ್ಲಪ್ಪ ತೋಟ–ದ, ಮುಖಂಡರಾದ ಚಂಬಣ್ಣ ಬಾಳಿಕಾಯಿ, ಸೋಮಣ್ಣ ಡಾಣಗಲ್, ಗುರುರಾಜ ಪಾಟೀಲ ಕುಲಕರ್ಣಿ, ಚನ್ನಪ್ಪ ಜಗಲಿ, ಪ್ರವೀಣ ಬಾಳಿಕಾಯಿ ಹಾಜರಿದ್ದರು.

### ಹಂಪಾಪಟ್ಟಣದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಪ್ರಬಂಧ ಸ್ಪರ್ಧೆ – ವಿಜೇತ ವಿದ್ಯಾರ್ಥಿಗಳಿಗೆ ಸನ್ಮಾನ

## ಮಕ್ಕಳ ವ್ಯಕ್ತಿತ್ವ ರೂಪಿಸುವಲ್ಲಿ ತಂದೆ–ತಾಯಿಯರ ಪಾತ್ರ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಪಾಪಟ್ಟಣ ಗ್ರಾಮದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ “ಮಕ್ಕಳ ವ್ಯಕ್ತಿತ್ವ ರೂಪಿಸುವಲ್ಲಿ ತಂದೆ–ತಾಯಿಯರ ಪಾತ್ರ” ವಿಷಯದ ಮೇಲೆ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಯಿತು.

ದಿವಂಗತ ಶ್ರೀಮತಿ ಹನುಮಕ್ಕ ಅವರ 7ನೇ ವರ್ಷದ ಪುಣ್ಯಸ್ಮರಣೆ ನಿಮಿತ್ತ ಮಾರ್ಚ್ 14ರಂದು ಹಂಪಾಪಟ್ಟಣ ಗ್ರಾಮದ ಶ್ರೀ ಚಂದ್ರಮೌಳೇಶ್ವರ ಪ್ರೌಢಶಾಲೆಯ ಆವರಣದಲ್ಲಿ ಶ್ರೀ ಮಾತಾ ಸೇವಾ ಟ್ರಸ್ಟ್ ವತಿಯಿಂದ ಕಾರ್ಯಕ್ರಮ ನಡೆಯಿತು.

ಈ ಪ್ರಬಂಧ ಸ್ಪರ್ಧೆಯಲ್ಲಿ ಒಟ್ಟು 56 ವಿದ್ಯಾರ್ಥಿ–ವಿದ್ಯಾರ್ಥಿನಿಯರು ಭಾಗವಹಿಸಿ ತಮ್ಮ ಪ್ರಬಂಧಗಳನ್ನು ಮಂಡಿಸಿದರು. ಸ್ಪರ್ಧೆಯಲ್ಲಿ ವಿಜೇತರಾದ 9 ವಿದ್ಯಾರ್ಥಿಗಳಿಗೆ ಗೌರವ ಸನ್ಮಾನ ಮಾಡಲಾಗಿದ್ದು, ಉಳಿದ 47 ವಿದ್ಯಾರ್ಥಿಗಳಿಗೆ ಅಭಿನಂದನಾ ಪತ್ರಗಳನ್ನು ಟ್ರಸ್ಟ್ ವತಿಯಿಂದ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕರಾದ ಚಂದ್ರಪ್ಪ ಲಂಬಾಣಿ, ಶಿಕ್ಷಕರಾದ ಕೊಟ್ರೇಶ್, ರಾಘವೇಂದ್ರ, ಪಿ. ಪಾಂಡುರಂಗ, ಪುಟಾಣಿಕರ್, ಮಧು, ಮಲ್ಲಿಕಾರ್ಜುನ ಜೆ.ಎಸ್. ಸೇರಿದಂತೆ ಶಿಕ್ಷಕರು, ಸಿಬ್ಬಂದಿ ವರ್ಗ, ಪಾಲಕರು ಹಾಗೂ ಶಿಕ್ಷಣ ಪ್ರೇಮಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶ್ರೀ ಮಾತಾ ಸೇವಾ ಟ್ರಸ್ಟ್ ಅಧ್ಯಕ್ಷರಾದ ಜೆ. ಶ್ರೀನಿವಾಸ್ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಗಣ್ಯರಿಗೆ ಟ್ರಸ್ಟ್ ಪರವಾಗಿ ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದರು.





**ಗಜೇಂದ್ರಗಡ:** ಸಮೀಪದ ಮುಶಿಗೇರಿ ಗ್ರಾಮದಲ್ಲಿ ಗುರುವಾರ ಶರಣಬಸವೇಶ್ವರ ಜಾತ್ರಾ ಮಹೋತ್ಸವದ ಸಮಾರೋಪ ಸಮಾರಂಭ ಅಂಗವಾಗಿ ನಡೆದ ರಸಮಂಜರಿ ಕಾರ್ಯಕ್ರಮವನ್ನು ರಾಜಶೇಖರ ಮಾಲಗಿತ್ತಿ ಉದ್ಘಾಟಿಸಿದರು. ಬಸವರಾಜ ಗುಡದೂರ, ಮಲ್ಲಿಕಾರ್ಜುನ ಬೇವಿನಮರದ, ಮಲ್ಲು ಗೌಡರ, ಶಿವಪ್ಪ ಮಾದರ ಇದ್ದರು.

## ನಿಧನ

### ಕಲ್ಲಿನಾಥ ಕುಲಕರ್ಣಿ



**ಗದಗ:** ಬ್ರಾಹ್ಮಣ ಸಮಾಜದ ಹಿರಿಯ ಮುಖಂಡರು, ಸಮಾಜ ಸಂಘಟನೆಯ ಮುತ್ಸದ್ದಿಗಳು ಹಾಗೂ ಶ್ರೀ ಶಂಕರಸೇವಾ ಸಮಿತಿಯ ನಿಕಟಪೂರ್ವ ಕಾರ್ಯದರ್ಶಿಗಳಾದ ಕಲ್ಲಿನಾಥ (ಕಲ್ಲಪ್ಪ), ಎಸ್.ಕುಲಕರ್ಣಿ (ವಯಸ್ಸು 83) ಅವರು ನಿಧನರಾಗಿದ್ದಾರೆ.

ಮೃತರಿಗೆ ಪತ್ನಿ, ಡಾ. ಪ್ರಸನ್ನ ಕುಲಕರ್ಣಿ ಸೇರಿದಂತೆ ಇಬ್ಬರು ಪುತ್ರರು ಮತ್ತು ಓರ್ವ ಪುತ್ರಿಯೊಡನೆ ಅಪಾರ ಬಂಧು ಬಳಗವಿದೆ.

ಸಂತಾಪ: ಕಲ್ಲಿನಾಥ್ ಎಸ್.ಕುಲಕರ್ಣಿ ಅವರ ನಿಧನಕ್ಕೆ ಗದಗ ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ, ಪಟ್ಟಣದ ಬ್ರಹ್ಮವೃಂದ ಅಧ್ಯಕ್ಷ ಗೋಪಾಲ ಪಡ್ನೀಸ್, ತಾಲೂಕ ಬ್ರಾಹ್ಮಣ ಸಮಾಜದ ಅಧ್ಯಕ್ಷ ಕೃಷ್ಣ ಕುಲಕರ್ಣಿ, ಶಿರಹಟ್ಟಿ ಬ್ರಾಹ್ಮಣ ಸಮಾಜದ ಅಧ್ಯಕ್ಷ ಎನ್.ಆರ್. ಕುಲಕರ್ಣಿ, ನಿವೃತ್ತ ನೌಕರರ ಸಂಘ ಮತ್ತು ಹಿರಿಯ ನಾಗರೀಕರ ಸಂಘ ಸೇರಿದಂತೆ ಅನೇಕ ಮುಖಂಡರು, ಸಂಘ ಸಂಸ್ಥೆಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

## ಪತ್ರಕರ್ತರ ವಾರ್ಷಿಕ ಪ್ರಶಸ್ತಿಗೆ ಶಾಸಕ ಪಾಟೀಲ್ ರೂ. 1 ಲಕ್ಷ ಘೋಷಣೆ ಸ್ವಾಗತಾರ್ಹ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜಿಲ್ಲೆಯ ಹಾಗೂ ತಾಲೂಕಿನ ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ನೀಡಲು ರೂ. 1 ಲಕ್ಷ ರೂ. ಠೇವಣಿ ಇಡಲು ಶಾಸಕ ಜಿ.ಎಸ್. ಪಾಟೀಲ ಅವರು ಘೋಷಣೆ ಮಾಡಿದ್ದು ಸ್ವಾಗತಾರ್ಹ ಎಂದು ಕಕಾನಿಪ ತಾಲೂಕು ಪ್ರಧಾನ ಕಾರ್ಯದರ್ಶಿ ಎಸ್.ಎಂ.ಸೈಯದ್ ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ನಡೆದ ಮಾತೋಶ್ರೀ ಬಸಮ್ಮ ಸಂಗನಗೌಡ ಪಾಟೀಲ ಅವರ 22ನೇ ಸ್ಮರಣೋತ್ಸವದಲ್ಲಿ ರೋಣ ಮತಕ್ಷೇತ್ರದ ಶಾಸಕರು, ಎಂಎಸ್‌ಐಎಲ್ ನಿಗಮದ ಅಧ್ಯಕ್ಷರೂ ಆದ ಜಿ.ಎಸ್. ಪಾಟೀಲ ಅವರು, ತಮ್ಮ ತಾಯಿ ಹೆಸರಿನಲ್ಲಿ ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ರೂ. 1 ಲಕ್ಷ ಠೇವಣಿ ಇಡುವ ಬಗ್ಗೆ ಘೋಷಿಸಿದ್ದಾರೆ.



ಗದಗ ತಾಲೂಕು ಕಾರ್ಯನಿರತ ಪತ್ರಕರ್ತರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿ ವರ್ಷ ಒಬ್ಬರಿಗೆ ವಾರ್ಷಿಕ ಪ್ರಶಸ್ತಿ ನೀಡುವ ಉದ್ದೇಶದ ಹಿನ್ನಲೆಯಲ್ಲಿ ಶಾಸಕರು ಕೈಗೊಂಡಿರುವ ನಿರ್ಧಾರ ಸ್ವಾಗತಾರ್ಹ ಎಂದು ಸೈಯದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಣಿಪುರ ಹಿಂಸಾಚಾರ: ಕಾಮ್ಜಾಂಗ್‌ನಲ್ಲಿ ಇಬ್ಬರು ಕುಕಿ ಪುರುಷರು ಶವವಾಗಿ ಪತ್ತೆ; ಹೆಚ್ಚಿದ ಉದ್ವಿಗ್ನತೆ

■ವಿಜಯಸಾಕ್ಷಿ ಸುದ್ದಿ, ಮಣಿಪುರ

ಮಣಿಪುರದ ಕಾಮ್ಜಾಂಗ್ ಜಿಲ್ಲೆಯಲ್ಲಿ ಬುಧವಾರದಿಂದ ನಾಪತ್ತೆಯಾಗಿದ್ದ ಇಬ್ಬರು ಕುಕಿ ಪುರುಷರು ಗುರುವಾರ ಥವಾಯ್ ಕುಕಿ ಗ್ರಾಮದ ಅರಣ್ಯ ಪ್ರದೇಶದಲ್ಲಿ ಶವವಾಗಿ ಪತ್ತೆಯಾಗಿದ್ದರಿಂದ ಉದ್ವಿಗ್ನತೆ ಹೆಚ್ಚಾಗಿದೆ.

ಜಿಲ್ಲೆಯ ಥಾವಾಯಿ ಕುಕಿ ಗ್ರಾಮದ 42 ವರ್ಷದ ಥೇಂಗಿನ್ ಬೈಟ್ ಮತ್ತು ನೆರೆಯ ಉಖ್ರುಲ್ ಜಿಲ್ಲೆಯ ಶಾಂಗ್‌ಕೈ ಗ್ರಾಮದ 35 ವರ್ಷದ ತಂಗ್‌ಬೋಯಿಮಾಂಗ್ ಖೋಂಗ್‌ಸಾಯ್ ಎಂದು ಗುರುತಿಸಲಾಗಿದೆ. ಕುಕಿ ವಿದ್ಯಾರ್ಥಿಗಳ ಸಂಘಟನೆಯ ಪ್ರಕಾರ, ಬುಧವಾರ ತಂಗ್ಖುಲ್ ನಾಗಾ ಸಮುದಾಯಕ್ಕೆ ಸೇರಿದ ಗ್ರಾಮ ಸ್ವಯಂಸೇವಕರು ಇಬ್ಬರನ್ನು ಅಪಹರಿಸಿದ್ದಾರೆ ಎಂದು ಆರೋಪಿಸಲಾಗಿದೆ.

ಕುಕಿ ಮೂಲದ ಶಾಂಗ್ಕೈ ಗ್ರಾಮ ಪ್ರಾಧಿಕಾರವು ಹೇಳಿಕೆಯಲ್ಲಿ ಇದೇ ವಿಷಯವನ್ನು ತಿಳಿಸಿದೆ. ಮೇ 2023 ರಲ್ಲಿ ಕುಕಿ–ಜೊ–ಹ್ಮಾರ್ ಮತ್ತು ಮೈತೈ ಸಮುದಾಯಗಳ ನಡುವೆ ಜನಾಂಗೀಯ ಘರ್ಷಣೆಗಳು ಭುಗಿಲೆದ್ದಾಗಿನಿಂದ ಗ್ರಾಮಗಳನ್ನು ಕಾಯುತ್ತಿರುವ ಸಶಸ್ತ್ರ ನಾಗರಿಕರಿಗೆ “ಗ್ರಾಮ ಸ್ವಯಂಸೇವಕರು” ಎಂಬ ಪದವನ್ನು ಬಳಸಲಾಗುತ್ತಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka